

ನಮ್ಮ ರೈತರು ಬಲಶಾಲಿಯಾದರೆ, ಭಾರತ ಸ್ವಾವಲಂಬಿಯಾಗುತ್ತದೆ.

ಇಂದು ಡಾ. ಬಾಬು ಜಗಜೀವನ್ ರಾಮ್ ಜನ್ಮದಿನ

# ಅನುಕ್ಷಣ

ಕನ್ನಡ ದಿನ ಪತ್ರಿಕೆ



Ad Media
ADVERTISING PARTNER
ALL KINDS OF NEWSPAPER PUBLICATIONS AT BEST PRICES
contact for
Public Notice | Court Notice | Document Lost
Change of Name | Gazette Notification
CONTACT - 77603 99909


VOLUME: 1 | ISSUE: 276 | BENGALURU 5-4-2026 ಭಾನುವಾರ www.anukshana.in ಬೆಲೆ: 5 ರೂ.

## ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯ 5ನೇ ಘಟಿಕೋತ್ಸವ

# ಗೌರವ ಡಾಕ್ಟರೇಟ್, ಚಿನ್ನದ ಪದಕಗಳ ವಿತರಣೆ

**ಅನುಕ್ಷಣ ಸುದ್ದಿ**

**ಬೆಂಗಳೂರು:** ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದ 5ನೇ ಘಟಿಕೋತ್ಸವ ಸಮಾರಂಭ ಜ್ಞಾನಜ್ಯೋತಿ ಸಭಾಂಗಣದಲ್ಲಿ ಅದ್ದೂರಿಯಾಗಿ ನೆರವೇರಿತು. ರಾಜ್ಯಪಾಲ ಹಾಗೂ ಕುಲಾಧಿಪತಿಗಳಾದ ಥಾವರ್‌ಚಂದ್ ಗೆಹ್ಲೋಟ್ ಸಮಾರಂಭಕ್ಕೆ ಚಾಲನೆ ನೀಡಿ ಕಾರ್ಯಕ್ರಮಕ್ಕೆ ಗೌರವ ಹೆಚ್ಚಿಸಿದರು.

ಈ ಘಟಿಕೋತ್ಸವದಲ್ಲಿ ಡಿಆರ್‌ಡಿಒ (DRDO) ಮಹಾ ನಿರ್ದೇಶಕರಾದ ಡಾ. ಬಿನಯ್ ಕುಮಾರ್ ದಾಸ್ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ವಿವಿಧ ಕ್ಷೇತ್ರಗಳಲ್ಲಿ ವಿಶೇಷ ಸಾಧನೆ ಮಾಡಿದ ಆರು ಗಣ್ಯರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಯಿತು.




ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದ 5ನೇ ಘಟಿಕೋತ್ಸವ ಅದ್ದೂರಿಯಾಗಿ ನಡೆಯಿತು.

**ಚಿನ್ನದ ಪದಕ ವಿಜೇತರು**

ಈ ಬಾರಿ ಅತಿ ಹೆಚ್ಚು ನಾಲ್ಕು ಚಿನ್ನದ ಪದಕಗಳನ್ನು ಸ್ನೇಹಾ ಟಿ. (ಎಂಎಸ್ಸಿ ರಸಾಯನಶಾಸ್ತ್ರ) ಪಡೆದರು. ಅಭಿಷೇಕ್ ಶ್ರೀರಾಮ್ (ಬಿ.ಕಾಂ) ಮೂರು ಚಿನ್ನದ ಪದಕಗಳನ್ನು ಗಳಿಸಿದರೆ, ದಿವ್ಯಶ್ರೀ ಎಸ್ (ಬಿಬಿಎ) ಕೂಡ ಮೂರು ಚಿನ್ನದ ಪದಕಗಳನ್ನು ಪಡೆದರು.

ಗೌರವ ಡಾಕ್ಟರೇಟ್ ಸ್ವೀಕರಿಸಿದ ಅರ್ಜುನ ಜನ್ಯ ಮಾತನಾಡಿ, ವಿಶ್ವವಿದ್ಯಾಲಯ ನೀಡಿದ ಈ ಗೌರವಕ್ಕೆ ಕೃತಜ್ಞತೆ ಸಲ್ಲಿಸಿದರು.

**ಗೌರವ ಡಾಕ್ಟರೇಟ್ ಪಡೆದ ಗಣ್ಯರು**

ಸಂಗೀತ ನಿರ್ದೇಶಕ ಅರ್ಜುನ ಜನ್ಯ, ಕ್ರಿಕೆಟರ್ ವೆಂಕಟೇಶ್ ಪ್ರಸಾದ್, ಶಿಕ್ಷಣ ತಜ್ಞ ಟಿ.ಕೆ. ನಾರಾಯಣಪ್ಪ, ಎಂಎಲ್‌ಸಿ ಡಾ. ಕೆ. ಗೋವಿಂದ್ ರಾಜ್, ಶಿಕ್ಷಣ ಕ್ಷೇತ್ರದ ಮೋಹನ್ ಆಳ್ವಾ ಹಾಗೂ ಕೈಗಾರಿಕೋದ್ಯಮಿ ಬಾವಾ ಮೊಹಮ್ಮದ್ ಫಾರೂಕ್ ಅವರಿಗೆ ರಾಜ್ಯಪಾಲರು ಗೌರವ ಡಾಕ್ಟರೇಟ್ ನೀಡಿ ಸನ್ಮಾನಿಸಿದರು. ಉಪ ಚುನಾವಣಾ ಪ್ರಚಾರದ ಹಿನ್ನೆಲೆಯಲ್ಲಿ ಉನ್ನತ ಶಿಕ್ಷಣ ಸಚಿವ ಡಾ. ಸುಧಾಕರ್ ಸಮಾರಂಭದಲ್ಲಿ ಭಾಗವಹಿಸಲಿಲ್ಲ.

**ವಿದ್ಯಾರ್ಥಿಗಳಿಗೆ ಪದವಿ, ಪದಕ ವಿತರಣೆ**

ಘಟಿಕೋತ್ಸವದಲ್ಲಿ 73 ಪ್ರಥಮ ರ್‍ಯಾಂಕ್ ವಿದ್ಯಾರ್ಥಿಗಳಿಗೆ ರ್‍ಯಾಂಕ್ ಪ್ರಮಾಣಪತ್ರ, ಚಿನ್ನದ ಪದಕ ಮತ್ತು ನಗದು ಬಹುಮಾನ ನೀಡಲಾಯಿತು. ಒಟ್ಟು 37,370 ವಿದ್ಯಾರ್ಥಿಗಳಿಗೆ ಪದವಿ ಮತ್ತು ಸ್ನಾತಕೋತ್ತರ ಪದವಿಗಳನ್ನು ಪ್ರದಾನ ಮಾಡಲಾಗಿದ್ದು, 23 ವಿದ್ಯಾರ್ಥಿಗಳಿಗೆ ಪಿಹೆಚ್‌ಡಿ ಪದವಿಗಳು ನೀಡಲಾಯಿತು.

# ಯುವಜನರೇ ಅಭಿವೃದ್ಧಿ ಭಾರತದ ಶಕ್ತಿಯ ಮೂಲ: ರಾಜ್ಯಪಾಲರ ಕರೆ

**ಬೆಂಗಳೂರು:** ಭಾರತವನ್ನು 2047ರೊಳಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ರೂಪಿಸುವಲ್ಲಿ ಯುವಜನರ ಪಾತ್ರ ಅತ್ಯಂತ ಪ್ರಮುಖವಾಗಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಹೇಳಿದರು.



ಬೆಂಗಳೂರು ನಗರ ವಿಶ್ವವಿದ್ಯಾನಿಲಯದ 5ನೇ ವಾರ್ಷಿಕ ಘಟಿಕೋತ್ಸವದಲ್ಲಿ ಮಾತನಾಡಿದ ಅವರು, ಯುವಜನರಿಗೆ ಸಮಗ್ರ ಜ್ಞಾನ, ಕೌಶಲ್ಯ ಮತ್ತು ಮೌಲ್ಯಗಳು ಅಗತ್ಯ. ರಾಷ್ಟ್ರೀಯ ಚೇತನ ಮತ್ತು ಹೊಣೆಗಾರಿಕೆಯ ಮನೋಭಾವ ಬೆಳೆಸಬೇಕು. ಶಿಕ್ಷಣವು ವ್ಯಕ್ತಿಯ ಸಂಪೂರ್ಣ ವ್ಯಕ್ತಿತ್ವವನ್ನು ರೂಪಿಸುವ ಸಾಧನವಾಗಬೇಕು ಎಂದು ಹೇಳಿದರು.

ಯುವಕರು ಸಶಕ್ತರಾಗಿದ್ದರೆ ಭಾರತವು ಜಾಗತಿಕ ಸಮುದಾಯದಲ್ಲಿ ಪ್ರಮುಖ ಸ್ಥಾನವನ್ನು ಖಚಿತವಾಗಿ ಸಾಧಿಸಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.




# ಹೊಸ ತಲೆಮಾರಿಗೆ 3–4 ಬಾರಿ ವೃತ್ತಿ ಬದಲಾವಣೆ ಅನಿವಾರ್ಯ

## ಡಿಆರ್‌ಡಿಓ ಮಹಾನಿರ್ದೇಶಕರ ಎಚ್ಚರಿಕೆ

**ಬೆಂಗಳೂರು:** ಇಂದಿನ ತಂತ್ರಜ್ಞಾನಾಧಾರಿತ ಜಗತ್ತಿನಲ್ಲಿ ಉದ್ಯೋಗ ಕ್ಷೇತ್ರದಲ್ಲಿ ಸ್ಥಿರತೆ ಕಡಿಮೆಯಾಗುತ್ತಿರುವ ಹಿನ್ನೆಲೆಯಲ್ಲಿ, ಹೊಸ ತಲೆಮಾರಿನವರು ತಮ್ಮ ವೃತ್ತಿ ಜೀವನದಲ್ಲಿ ಕನಿಷ್ಠ ಮೂರುರಿಂದ ನಾಲ್ಕು ಬಾರಿ ದಿಕ್ಕು ಬದಲಾಯಿಸುವ ಪರಿಸ್ಥಿತಿ ಎದುರಾಗಬಹುದು ಎಂದು ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ (ಡಿಆರ್‌ಡಿಓ)ಯ ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ವ್ಯವಸ್ಥೆಗಳ ಮಹಾನಿರ್ದೇಶಕ ಬಿನಯ್ ಕುಮಾರ್ ದಾಸ್ ಹೇಳಿದರು. ಘಟಿಕೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭವಿಷ್ಯದ ಉದ್ಯೋಗ ಪರಿಸ್ಥಿತಿಗಳ ಕುರಿತು ಎಚ್ಚರಿಸಿದರು.



**ಉದ್ಯೋಗ ಕ್ಷೇತ್ರದ ಬದಲಾವಣೆಗಳ ಸೂಚನೆ**

2027ರ ವೇಳೆಗೆ ಪ್ರಸ್ತುತ ಉದ್ಯೋಗದಲ್ಲಿರುವ ವೃತ್ತಿಪರರಲ್ಲಿ ಸುಮಾರು 25 ಶೇಕಡಾ ಮಂದಿ ತಮ್ಮ ಕೆಲಸ ಕಳೆದುಕೊಳ್ಳುವ ಸಾಧ್ಯತೆ ಇದೆ ಎಂದು ಅವರು ಅಭಿಪ್ರಾಯಪಟ್ಟರು. ಈ ಹಿನ್ನೆಲೆಯಲ್ಲಿ ಯುವಕರು ಒಂದೇ ಕ್ಷೇತ್ರಕ್ಕೆ ಸೀಮಿತವಾಗದೇ, ಹೊಸ ಕೌಶಲ್ಯಗಳನ್ನು ಕಲಿತು ವಿವಿಧ ಕ್ಷೇತ್ರಗಳಿಗೆ ಹೊಂದಿಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

**ತಂತ್ರಜ್ಞಾನಗಳ ವೇಗದ ಪ್ರಭಾವ**

ಕೃತಕ ಬುದ್ಧಿಮತ್ತೆ (Artificial Intelligence - AI), ಯಂತ್ರ ಅಧ್ಯಯನ (Machine Learning), ಬ್ಲಾಕ್‌ಚೇನ್ (Blockchain), ವಿಸ್ತರಿತ ವಾಸ್ತವಿಕತೆ (Augmented Reality), ಇಂಟರ್ನೆಟ್ ಆಫ್ ಥಿಂಗ್ಸ್ (IoT), ಮೆಟಾವರ್ಸ್ (Metaverse) ಹಾಗೂ ವೆಬ್ 3.0 (Web 3.0) ಸೇರಿದಂತೆ ಹಲವು ಆಧುನಿಕ ತಂತ್ರಜ್ಞಾನಗಳು ಜಗತ್ತಿನ ಉದ್ಯೋಗ ವಿನ್ಯಾಸವನ್ನೇ ಬದಲಾಯಿಸುತ್ತಿವೆ ಎಂದು ಅವರು ಹೇಳಿದರು. ಚಾಟ್‌ಜಿಪಿಟಿ (ChatGPT)ಂತಹ ತಂತ್ರಜ್ಞಾನಗಳು ಕೂಡ ಮುಂದಿನ ದಿನಗಳಲ್ಲಿ ಮಹತ್ತರ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಸೂಚಿಸಿದರು.

**ಸ್ಮಾರ್ಟ್ ಕಾರ್ಯಪದ್ಧತಿಯ ಅಗತ್ಯ**

ಭಾರತದ ಆರ್ಥಿಕ ಬೆಳವಣಿಗೆ ವೇಗವಾಗಿ ಮುಂದುವರಿಯುತ್ತಿರುವ ಸಂದರ್ಭದಲ್ಲಿ, ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸಲು ರಫ್ತು ವೃದ್ಧಿ, ಗುಣಮಟ್ಟದ ಉತ್ಪನ್ನಗಳ ನಿರ್ಮಾಣ ಮತ್ತು ನವೀನತೆ ಅತ್ಯಗತ್ಯವೆಂದು ಅವರು ಹೇಳಿದರು. ಕೇವಲ ಶ್ರಮಕ್ಕಿಂತ ಬುದ್ಧಿವಂತಿಕೆಯಿಂದ ಕೆಲಸ ಮಾಡುವ ಸ್ಮಾರ್ಟ್ ವರ್ಕ್‌ಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು ಎಂದು ತಿಳಿಸಿದರು.

**ಮುಂದಿನ ಸವಾಲುಗಳಿಗೆ ಸಿದ್ಧತೆ**

ನಗರೀಕರಣದೊಂದಿಗೆ ಹೆಚ್ಚುತ್ತಿರುವ ಟ್ರಾಫಿಕ್, ಪರಿಸರ ಮಾಲಿನ್ಯ, ಇಂಧನದ ಕೊರತೆ ಹಾಗೂ ಸ್ಥಿರತೆಯ ಪ್ರಶ್ನೆಗಳು ಭವಿಷ್ಯದ ಪ್ರಮುಖ ಸವಾಲುಗಳಾಗಿವೆ ಎಂದು ಅವರು ಹೇಳಿದರು. ಈ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಶಿಕ್ಷಣ ವ್ಯವಸ್ಥೆ ವಿದ್ಯಾರ್ಥಿಗಳನ್ನು ತಯಾರಿಸುವುದು ಅತ್ಯಂತ ಮುಖ್ಯವೆಂದು ಅಭಿಪ್ರಾಯಪಟ್ಟರು.

**ಭವಿಷ್ಯದ ಸವಾಲುಗಳು**

ಟ್ರಾಫಿಕ್, ಮಾಲಿನ್ಯ, ಇಂಧನ ಮತ್ತು ಸ್ಥಿರತೆ ಮುಂತಾದ ಸವಾಲುಗಳನ್ನು ಎದುರಿಸುವಲ್ಲಿ ಶಿಕ್ಷಣ ವ್ಯವಸ್ಥೆಯ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

# ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ವಿವಿ ಮಹತ್ವದ ಸ್ಥಾನ ಪಡೆದಿದೆ

**ಬೆಂಗಳೂರು:** ಬೆಂಗಳೂರು ನಗರ ವಿಶ್ವವಿದ್ಯಾನಿಲಯದ 5ನೇ ಘಟಿಕೋತ್ಸವದಲ್ಲಿ ಕುಲಪತಿ ಪ್ರೊ. ಬಿ. ರಾಮೇಶ್ ವಿಶ್ವವಿದ್ಯಾನಿಲಯದ ಅಭಿವೃದ್ಧಿ, ಸಾಧನೆಗಳು ಮತ್ತು ಭವಿಷ್ಯದ ದೃಷ್ಟಿಕೋನವನ್ನು ವಿವರಿಸಿದರು. 1858ರಲ್ಲಿ ಆರಂಭವಾದ ಸೆಂಟ್ರಲ್ ಕಾಲೇಜು ಕ್ಯಾಂಪಸ್‌ನ ಐತಿಹಾಸಿಕ ಪರಂಪರೆಯನ್ನು ಮುಂದುವರಿಸಿಕೊಂಡು ಬರುತ್ತಿರುವ ವಿಶ್ವವಿದ್ಯಾನಿಲಯವು ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಮಹತ್ವದ ಸ್ಥಾನ ಪಡೆದಿದೆ ಎಂದು ಹೇಳಿದರು.

**ವೈವಿಧ್ಯಮಯ ಪಠ್ಯಕ್ರಮಗಳು ಮತ್ತು ನವೀನ ಶಿಕ್ಷಣ ವ್ಯವಸ್ಥೆ**

ಪ್ರಸ್ತುತ ವಿಶ್ವವಿದ್ಯಾನಿಲಯವು 25 ಸ್ನಾತಕೋತ್ತರ (Postgraduate) ಕಾರ್ಯಕ್ರಮಗಳನ್ನು ನೀಡುತ್ತಿದ್ದು, ಒಟ್ಟು ಸುಮಾರು 100ಕ್ಕೂ ಹೆಚ್ಚು ಪದವಿ, ಸ್ನಾತಕೋತ್ತರ, ಪಿಎಚ್‌ಡಿ, ಪ್ರಮಾಣಪತ್ರ ಮತ್ತು ಡಿಪ್ಲೋಮಾ ಕೋರ್ಸ್‌ಗಳನ್ನು ನಡೆಸುತ್ತಿದೆ.

ಕೃತಕ ಬುದ್ಧಿಮತ್ತೆ (Artificial Intelligence), ಯಂತ್ರ ಕಲಿಕೆ (Machine Learning), ಫಿನ್‌ಟೆಕ್ (FinTech), ಆಡಿಯೋ ಎಂಜಿನಿಯರಿಂಗ್ (Audio Engineering), ಸೌಂಡ್ ಡಿಸೈನ್ (Sound Design) ಸೇರಿದಂತೆ ಉದ್ಯೋಗೋದ್ಯಮಕ್ಕೆ ಹೊಂದಿಕೊಂಡ ನವೀನ ಕೋರ್ಸ್‌ಗಳಿಗೆ ಆದ್ಯತೆ ನೀಡಲಾಗಿದೆ ಎಂದು ತಿಳಿಸಿದರು.

**ಸಂಶೋಧನೆ, ತಂತ್ರಜ್ಞಾನ ಮತ್ತು ಕೈಗಾರಿಕಾ ಸಂಪರ್ಕ**

ಭಾರತೀಯ ವಿಜ್ಞಾನ ಸಂಸ್ಥೆ (Indian Institute of Science) ಸಹಯೋಗದಲ್ಲಿ ಇಂಕ್ಯುಬೇಶನ್ ಕೇಂದ್ರದ ಮೂಲಕ ಸಸ್ಟೇನಬಿಲಿಟಿ (Sustainability) ಆಧಾರಿತ ಆವಿಷ್ಕಾರಗಳಿಗೆ ಉತ್ತೇಜನ ನೀಡಲಾಗುತ್ತಿದೆ.

ಕೃತಕ ಬುದ್ಧಿಮತ್ತೆ ಮತ್ತು ಡಿಜಿಟಲ್ ಸಾಧನಗಳನ್ನು ಬೋಧನೆ ಹಾಗೂ ಸಂಶೋಧನೆಗೆ ಅಳವಡಿಸಿಕೊಂಡು ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲಾಗುತ್ತಿದೆ. ಯುಸಿಎಸ್ (UCS) ವ್ಯವಸ್ಥೆಯ ಮೂಲಕ ಪ್ರವೇಶ, ಹಣಕಾಸು ಮತ್ತು ಪರೀಕ್ಷಾ ಪ್ರಕ್ರಿಯೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ.



**ಸಮಾವೇಶಿತ ಶಿಕ್ಷಣಕ್ಕೆ ಒತ್ತು**

ಎಸ್‌ಸಿ/ಎಸ್‌ಟಿ, ಓಬಿಸಿ, ಅಲ್ಪಸಂಖ್ಯಾತರು ಸೇರಿದಂತೆ ವಿವಿಧ ಹಿನ್ನಡೆಯ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಹಾಗೂ ವಿವಿಧ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

ವಿಶೇಷವಾಗಿ ಎಸ್‌ಸಿ/ಎಸ್‌ಟಿ ಸಂಶೋಧನಾ ವಿದ್ಯಾರ್ಥಿಗಳಿಗೆ ತಿಂಗಳಿಗೆ ₹10,000 ಫೆಲೋಶಿಪ್ ನೀಡಲಾಗುತ್ತಿದೆ. ದೃಷ್ಟಿಹೀನ ವಿದ್ಯಾರ್ಥಿಗಳಿಗೆ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಉದ್ಯೋಗಾವಕಾಶಗಳನ್ನು ಉತ್ತೇಜಿಸುವ ಕ್ರಮಗಳನ್ನು ಕೈಗೊಳ್ಳಲಾಗಿದೆ.

**ಕೌಶಲ್ಯಾಭಿವೃದ್ಧಿ ಮತ್ತು ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ**

2026 ಜನವರಿ 8ರಂದು ಪ್ರಾರಂಭವಾದ ಪೂರ್ವ-ಪರೀಕ್ಷಾ ತರಬೇತಿ ಕೇಂದ್ರವು (Pre-Examination Coaching Centre) ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ವಿದ್ಯಾರ್ಥಿಗಳನ್ನು ಸಿದ್ಧಗೊಳಿಸುತ್ತಿದೆ.

ಇದೇ ವೇಳೆ, 14 ವಿದೇಶಿ ಭಾಷೆಗಳ ತರಬೇತಿಯನ್ನು ನೀಡಲು ಇಂಗ್ಲಿಷ್ ಮತ್ತು ಜಾಗತಿಕ ಭಾಷಾ ಕೇಂದ್ರವನ್ನು ಸ್ಥಾಪಿಸಲಾಗುತ್ತಿದೆ.

**ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳು**

2025-26ರ ಅವಧಿಯಲ್ಲಿ ವಿಶ್ವವಿದ್ಯಾನಿಲಯವು ಅನೇಕ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಸಮ್ಮೇಳನಗಳು, ಕಾರ್ಯಾಗಾರಗಳು ಮತ್ತು ಸಾಹಿತ್ಯಿಕ ಕಾರ್ಯಕ್ರಮಗಳನ್ನು ಆಯೋಜಿಸಿದೆ.

ಗಾಂಧೀಜಿ ಚಿಂತನೆಗಳ ಕುರಿತು ಕಾರ್ಯಾಗಾರ, ಡಿಜಿಟಲ್ ಇಂಡಿಯಾ (Digital India) ಕುರಿತ ರಾಷ್ಟ್ರೀಯ ಸಮ್ಮೇಳನ, ಜಾಗತಿಕ ಗುರಿಗಳು (Global Goals) ಕುರಿತ ಅಂತರಾಷ್ಟ್ರೀಯ ಸಮ್ಮೇಳನ ಸೇರಿದಂತೆ ಹಲವು ಕಾರ್ಯಕ್ರಮಗಳು ಗಮನ ಸೆಳೆದಿವೆ.

**ಸಾಧನೆಗಳಿಗೆ ಗೌರವ ಮತ್ತು ಗೌರವ ಡಾಕ್ಟರೇಟ್ ಪ್ರದಾನ**

ಘಟಿಕೋತ್ಸವದಲ್ಲಿ ಹಲವು ಗಣ್ಯರಿಗೆ ಗೌರವ ಡಾಕ್ಟರೇಟ್ (Honorary Doctorate) ಪ್ರದಾನಿಸಲಾಯಿತು. ಸಂಗೀತ ಕ್ಷೇತ್ರದಲ್ಲಿ ಸಾಧನೆ ಮಾಡಿದ ಅರ್ಜುನ್ ಜಾನ್ಯ ಸೇರಿದಂತೆ ಶಿಕ್ಷಣ, ಕ್ರೀಡೆ ಮತ್ತು ಸಮಾಜಸೇವೆ ಕ್ಷೇತ್ರದ ಗಣ್ಯರನ್ನು ಸನ್ಮಾನಿಸಲಾಯಿತು.

**ವಿದ್ಯಾರ್ಥಿಗಳಿಗೆ ಅಭಿನಂದನೆ**

ಪದವಿ, ಸ್ನಾತಕೋತ್ತರ ಮತ್ತು ಪಿಎಚ್‌ಡಿ ಪದವೀಧರರಿಗೆ ಅಭಿನಂದನೆ ಸಲ್ಲಿಸಿದ ಪ್ರೊ. ರಾಮೇಶ್, "ನಿಜವಾದ ಪ್ರಗತಿ ಪದವಿಗಳಲ್ಲಿ ಅಲ್ಲ, ಬೌದ್ಧಿಕ ನೈತಿಕತೆ ಮತ್ತು ಸಮಾನ ಮನೋಭಾವದಲ್ಲಿ ಇದೆ" ಎಂದು ಹೇಳಿದರು.





# ಹಂಪಿ ಜಾತ್ರೆ ಪ್ರಯುಕ್ತ ಯಶಸ್ವಿಯಾಗಿ ಜರುಗಿದ 30ನೇ ವರ್ಷದ ಭಕ್ತಿ ಭಾವನ ಕಾರ್ಯಕ್ರಮ

**ಹೊಸಪೇಟೆ**

ಕಡ್ಡಿರಾಂಪುರ ಹಂಪಿ ಜಾತ್ರೆಯ ಪ್ರಯುಕ್ತ ಶ್ರೀ ಮರಿದೇವ ಸಾಂಸ್ಕೃತಿಕ ಕಲಾವೃಂದ ಶ್ರೀ ವಿರುಪಾಕ್ಷೇಶ್ವರ ದೇವಸ್ಥಾನದ ಸಹಯೋಗದೊಂದಿಗೆ 30ನೇ ವರ್ಷದ ಭಕ್ತಿ ಭಾವನ ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿದ ಹಂಪಿ ಶ್ರೀ ವಿದ್ಯಾರಣ್ಯ ಪೀಠಾಧಿಪತಿಗಳಾದ ಶ್ರೀ ಶಂಕರಾಚಾರ್ಯ ವಿದ್ಯಾರಣ್ಯ ಭಾರತೀ ಸ್ವಾಮೀಜಿಗಳು ಆರ್ಶಿವಚನ ನೀಡಿ ಮಾತನಾಡಿದ ಶ್ರೀಗಳು ನಮ್ಮ ಸನಾತನ ಧಾರ್ಮಿಕ ಸಂಸ್ಕೃತಿಗಳನ್ನು ನಮ್ಮ ಯುವ ಸಮೂಹ ರೂಡಿಸಿಕೊಳ್ಳಬೇಕು. ನಮ್ಮದು ಸರ್ವೆಜನೋ ಸುಖಿನೋಭವಂತು ಎನ್ನುವ ಸಂಸ್ಕೃತಿ ಎಲ್ಲರನ್ನು ಪ್ರೀತಿಸುವ ಧರ್ಮ ನಮ್ಮದು ಗುರುಹಿರಿಯರಲ್ಲಿ ಗೌರವ, ದೇವರಲ್ಲಿನ ಭಕ್ತಿ ಸಂಗೀತ ಭಕ್ತಿ ಮಾರ್ಗಕ್ಕೆ ನಮ್ಮನ್ನು ಕರೆದೊಯ್ಯುವ ಸಾಧನ ನಮ್ಮ ಯುವಕರು ವಿದೇಶ ಸಂಸ್ಕೃತಿಗೆ ಮಾರುಹೋಗದೆ ನಮ್ಮ ದೇಶಿಯ ಕಲೆಗಳನ್ನು ರೂಢಿಸಿಕೊಳ್ಳಬೇಕು ಎಂದರು.




ಹಂಪಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಗಂಗಾಧರ ಮಾತನಾಡಿ ಶ್ರೀ ಮರಿದೇವ ಸಂಗೀತ ಕಲಾವೃಂದ ಸತತ ಹಂಪಿ ಕ್ಷೇತ್ರದಲ್ಲಿ 30 ವರ್ಷಗಳಿಂದ ಕಾರ್ಯಕ್ರಮವನ್ನು ಹಮ್ಮಿಕೊಂಡು ಬರುತ್ತಿರುವುದು ಇಲ್ಲಿ ಬಂದಂತಹ ಭಕ್ತಾದಿಗಳಿಗೆ ದೇಶ ವಿದೇಶ ಪ್ರವಾಸಿಗರಿಗೆ ನಮ್ಮ ಸಾಂಸ್ಕೃತಿಕ ಮನೋರಂಜನೆ ನೀಡುತ್ತಿರುವುದು ಎಲ್ಲರಿಗೂ ಸಂತೋಷದ ವಿಷಯ ಎಂದರು.

ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ತುರುವನೂರು ಅವರಿಂದ ಹಿಂದೂಸ್ಥಾನಿ ಸಂಗೀತ, ಶ್ರೀಮತಿ ಸುಮಾ ಕಾಳಘಟ್ಟರವರಿಂದ ಸುಗಮ ಸಂಗೀತ, ಅಂಗಡಿ ಸಮರ್ಥ, ಸ್ಫೂರ್ತಿ ಭಟ್ ಹುಲಿಗಿ, ಜಮೂನರಾಣಿ ಹಿರೇಮಠ, ಶ್ರೀರಕ್ಷ ಪಾಟೀಲ್ ರವರಿಂದ ಭಕ್ತಿಗೀತೆಗಳು, ಗಂಗಾವತಿ ವೈಷ್ಣವಿ ತಂಡದಿಂದ ಭರತನಾಟ್ಯ, ಕಂಪ್ಲಿ ಭರತನಾಟ್ಯ ಕಲಾವಿದರಿಂದ ಸಮೂಹ ನೃತ್ಯ, ಪ್ರದರ್ಶನ ಹಾಗೂ ವಿವಿಧ ಕಲಾವಿದರಿಂದ ಕಾರ್ಯಕ್ರಮಗಳು ಯಶಸ್ವಿಯಾಗಿ ಜರುಗಿತ್ತು. ಕಾರ್ಯಕ್ರಮದ ನಿರೂಪಣೆಯನ್ನು ಎ.ದೊಡ್ಡಬಸಪ್ಪ, ಕೆ.ಪಂಪನ ಗೌಡ ನೆರವೇರಿಸಿದರು.

ಈ ಸಂದರ್ಭದಲ್ಲಿ ಹಂಪಿ ಗ್ರಾ.ಪಂ. ಮಾಜಿ ಸದಸ್ಯರುಗಳಾದ ಕೆ.ಗೋಪಾಲ್, ಕೆ.ಷಣ್ಮುಖಗೌಡ, ಹಾಗೂ ಕಲಾವೃಂದದ ಸಂಸ್ಥಾಪಕ ಅಧ್ಯಕ್ಷ ಅಂಗಡಿ ವಾಮದೇವ, ವಿಶ್ವನಾಥ ಹಿಟ್ನಾಳ್, ಹೆಚ್. ಕೆ.ತರುಣಕುಮಾರ, ಇತರ ಮುಖಂಡರುಗಳು ಭಾಗವಹಿಸಿದ್ದರು.

# ಮಧ್ಯಪ್ರಾಚ್ಯ ಯುದ್ಧ ಎಫೆಕ್ಟ್: ಹೊರದೇಶಕ್ಕೆ ಮೊಟ್ಟೆ ರಪ್ತು ಸ್ಥಗಿತ, ದರ ಕುಸಿತ

**ಚಾಮರಾಜನಗರ**

ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧದ ಪರಿಣಾಮವಾಗಿ ಗಲ್ಫ್ ರಾಷ್ಟ್ರಗಳಿಗೆ ಜಿಲ್ಲೆ ಸೇರಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಕೋಳಿಮೊಟ್ಟೆ ರಫ್ತು ಸಂಪೂರ್ಣ ಸ್ಥಗಿತಗೊಂಡಿದ್ದು, ಮೊಟ್ಟೆ ದರದಲ್ಲಿ ಕುಸಿತ ಕಂಡುಬಂದಿದೆ.

ಒಂದು ಹಂತದಲ್ಲಿ 6.80 ರೂ.ವರೆಗೂ ಇದ್ದ ಒಂದು ಮೊಟ್ಟೆ ದರ ಇದೀಗ 4.47 ರೂ.ಗೆ ಕುಸಿದಿದೆ. ಯುದ್ಧದ ಪರಿಣಾಮ ಹಾಗೂ ಬೇಸಿಗೆ ರಜೆ ಸೇರಿ ಒಟ್ಟಾರೆಯಾಗಿ ಸದ್ಯದ ಪರಿಸ್ಥಿತಿಯಲ್ಲಿ ಒಂದು ಮೊಟ್ಟೆಗೆ 2.50 ರೂ.ಗಳಿಂದ 3 ರೂ.ವರೆಗೆ ಕಳೆದ 1 ತಿಂಗಳ ಅಂತರದಲ್ಲಿ ಕುಸಿತವಾಗಿದೆ.

ಚಾಮರಾಜಗರ ಜಿಲ್ಲೆ ಸೇರಿ ಕರ್ನಾಟಕದಿಂದ ತಮಿಳುನಾಡಿನ ಮೂಲಕ ಗಲ್ಫ್ ದೇಶಗಳಾದ ಒಮಾನ್, ಕುವೈತ್, ಯುಎಇ, ಕತಾರ್ ಇತರೆ ದೇಶಗಳಿಗೆ ಮೊಟ್ಟೆ ರಫ್ತು ಆಗುತ್ತಿದ್ದವು. ಯುದ್ಧದಿಂದಾಗಿ ಈ ರಫ್ತು ಸಂಪೂರ್ಣ ನಿಂತಿದ್ದು, ಆ ಮೊಟ್ಟೆಗಳೆಲ್ಲಕ್ಕೂ ಇದೀಗ ದೇಶೀಯ ಮಾರುಕಟ್ಟೆಯೇ ಆಧಾರವಾಗಿದೆ. ಹೀಗಾಗಿ ಬೇಡಿಕೆ ಕ್ಷೀಣಿಸಿದ ಪರಿಣಾಮ ದರವೂ ಕುಸಿತಕ್ಕೆ ಒಳಗಾಗಿದೆ ಎನ್ನುತ್ತಾರೆ ಮಾರಾಟಗಾರರು.

ಮಾಹಿತಿ ಪ್ರಕಾರ, ರಾಜ್ಯದಿಂದಲೇ ತಮಿಳುನಾಡಿನ ನಾಮಕ್ಕಲ್ ಮೂಲಕ ಗಲ್ಫ್ ದೇಶಗಳಿಗೆ ಪ್ರತಿ ದಿನ ಅಂದಾಜು 80 ಲಕ್ಷ ಮೊಟ್ಟೆಗಳು ಹೋಗುತ್ತಿದ್ದವು. ಈಗ ಆ ಎಲ್ಲ ಪೂರೈಕೆ ದೇಶೀಯ ಮಾರುಕಟ್ಟೆಯಲ್ಲಿ ತುಂಬಿಹೋಗಿದೆ ಎಂದು ಮಾರಾಟಗಾರರು ಹೇಳುತ್ತಾರೆ. ಬೇಸಿಗೆ ಬಿಸಿಲು, ಶಾಲಾ ರಜೆಗಳಿಂದ ಬೇಡಿಕೆಯೂ ಕಡಿಮೆಯಾಗಿದೆ. ಸಾಮಾನ್ಯವಾಗಿ ಬೇಸಿಗೆಯಲ್ಲಿ ಉತ್ಪಾದನೆ ಕುಸಿದು ಬೆಲೆ ಏರುತ್ತದೆ. ಆದರೆ ಈ ಬಾರಿ ಯುದ್ಧದಿಂದ ಪರಿಣಾಮ ದರ



ಕುಸಿತಕ್ಕೆ ಒಳಗಾಗಿರುವುದು ಪೌಲ್ಟ್ರಿ ಉದ್ಯಮದವರನ್ನು ಸಂಕಷ್ಟಕ್ಕೀಡು ಮಾಡಿದೆ.

**ಗ್ರಾಹಕರಿಗೆ ಲಾಭ, ಉದ್ಯಮದವರಿಗೆ ನಷ್ಟ**

ಚಿಲ್ಲರೆ ಮಾರುಕಟ್ಟೆಯಲ್ಲಿ ಇನ್ನೂ ಸ್ವಲ್ಪ ಹೆಚ್ಚು ದರವಿದ್ದರೂ ಸಗಟು ದರ ಕುಸಿತದಿಂದ ಗ್ರಾಹಕರು ಲಾಭ ಪಡೆಯುತ್ತಿದ್ದಾರೆ. ಆದರೆ ಕೋಳಿ ಸಾಕಾಣಿ–ಕೆದಾರರು ಉತ್ಪಾದನಾ ವೆಚ್ಚಕ್ಕಿಂತ ಕಡಿಮೆ ಬೆಲೆಗೆ ಮೊಟ್ಟೆ ಮಾರಾಟ ಮಾಡಬೇಕಾದ ಪರಿಸ್ಥಿತಿಗೆ ಸಿಲುಕಿದ್ದಾರೆ. ಯುದ್ಧ ನಿಂತು ರಫ್ತು ಪುನಾರಂಭವಾದರೆ ಬೆಲೆ ಸ್ಥಿರಗೊಳ್ಳುವ ಸಾಧ್ಯತೆ ಇದೆ. ಆದರೆ, ಅಲ್ಲಿಯ ತನಕ ಪೌಲ್ಟ್ರಿ ಉದ್ಯಮದವರು ನಷ್ಟ ತಗ್ಗಿಸುವ ನಿಟ್ಟಿನಲ್ಲಿ ಪರ್ಯಾಯ ಮಾರ್ಗಗಳನ್ನು ಕಂಡುಕೊಳ್ಳಬೇಕಾಗಿದೆ.

ಒಂದು ವೇಳೆ ಯುದ್ಧ ಮುಂದುವರಿದರೆ ಮೊಟ್ಟೆ ದರ ಮತ್ತಷ್ಟು ಇಳಿಯುವ ಭೀತಿಯೂ ಆವರಿಸಿದೆ. ಈ ನಿಟ್ಟಿನಲ್ಲಿ ರಾಜ್ಯ ಮತ್ತು ಕೇಂದ್ರ ಸಕಅರ್ರಗಳು ಪರ್ಯಾಯ ವ್ಯವಸ್ಥೆ ಮಾಡಬೇಕೆಂದು ಸಗಟು ವ್ಯಾಪಾರಸ್ಥರು ಹಾಗೂ ಪೌಲ್ಟ್ರಿ ಉದ್ಯಮದವರು ಒತ್ತಾಯಿಸಿದ್ದಾರೆ.

# ಸಹಪಾಠಿಗಳ ಅಪಪ್ರಚಾರ: ಬಿಎಂಎಸ್ ಇಂಟರ್ನ್‌ಶಿಪ್ ವಿದ್ಯಾರ್ಥಿನಿ ಆತ್ಮಹತ್ಯೆ



**, ಹೊಳಲ್ಕೆರೆ**

ಸಹಪಾಠಿಗಳು ತನ್ನ ಬಗ್ಗೆ ಸುಳ್ಳು ಅಪಪ್ರಚಾರ ಮಾಡಿ ಮಾನಸಿಕ ಕಿರುಕುಳ ನೀಡುತ್ತಿದ್ದಾರೆಂದು ಮನನೊಂದ ಆಯುರ್ವೇದ ಇಂಟರ್ನ್‌ಶಿಪ್ ವಿದ್ಯಾರ್ಥಿನಿಯೊಬ್ಬಳು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಪಟ್ಟಣದ ಬಸವ ಲೇಔಟ್‌ನಲ್ಲಿ ನಡೆದಿದೆ.

ಶಿಕ್ಷಕರಾದ ಉಮಾಶಂಕರ್ ಹಾಗೂ ಮಮತಾ ದಂಪತಿ ಪುತ್ರಿ ಲಿಖಿತಾ ಆತ್ಮಹತ್ಯೆಗೆ ಶರಣಾದ ವಿದ್ಯಾರ್ಥಿನಿ. ಹೊಳಲ್ಕೆರೆ ತಾಲೂಕಿನ ಮಲ್ಲಾಡಿಹಳ್ಳಿ ಆಯುರ್ವೇದ ಕಾಲೇಜಿನಲ್ಲಿ ಬಿಎಂಎಸ್ ವ್ಯಾಸಂಗ ಮಾಡಿ ಇಂಟರ್ನ್‌ಶಿಪ್ ಮಾಡುತ್ತಿದ್ದಳು. ಸಹಪಾಠಿಗಳಾದ ಅನುಷಾ ಜಿ.ಆರ್., ರಕ್ಷಾ, ಚಿನ್ನಮ್ಮ, ಗ್ರೀಷ್ಮಾ ಮತ್ತು ಸಾಗರ್ ಎಂಬುವರು ಲಿಖಿತಾ ಹಾಗೂ ಕಾಲೇಜು ಉಪನ್ಯಾಸಕರೊಬ್ಬರ ನಡುವೆ ಸ್ನೇಹ ಸಂಬಂಧವಿದೆ ಎಂಬರ್ಥದಲ್ಲಿ ಅಪಪ್ರಚಾರ ಮಾಡಿದ್ದರು.

ವಿಷಯ ತಿಳಿದ ಉಪನ್ಯಾಸಕರ ಪತ್ನಿ ಪ್ರಾಚಾರ್ಯರ ಮುಂದೆ ಲಿಖಿತಾಳನ್ನು ತರಾಟೆಗೆ ತೆಗೆದುಕೊಂಡಿದ್ದರು. ಇದರಿಂದ ಮನ ನೊಂದಿದ್ದ ಲಿಖಿತಾ, ತನ್ನ ಮನೆಯಲ್ಲಿ ಸೀರೆಯಿಂದ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ತನ್ನ ಮಗಳ ಸಾವಿಗೆ ನಿಶಾ ಸೇರಿ ಅಪಪ್ರಚಾರ ಮಾಡಿದ ಎಲ್ಲರೂ ನೇರ ಕಾರಣ ಎಂದು ಲಿಖಿತಾ ಪೋಷಕರು ಹೊಳಲ್ಕೆರೆ ಠಾಣೆಗೆ ದೂರು ನೀಡಿದ್ದಾರೆ.

# ಯಾವ ದಿಗ್ಬಂಧನ ಆದ್ರೂ ನಮ್ಮನ್ನ ತಡಿಯೋಕೆ ಸಾಧ್ಯನಾ?: ಯುದ್ಧದ ನಡುವೆಯೂ ಹಾರ್ಮುಜ್ ದಾಟಿದ 8 ಹಡಗುಗಳು

ಪಶ್ಚಿಮ ಏಷ್ಯಾದಲ್ಲಿ ಇರಾನ್ ಯುದ್ಧದ ಉದ್ವಿಗ್ನತೆ ಮುಂದುವರಿದಿದ್ದರೂ, ಭಾರತದ ಇಂಧನ ಸರಬರಾಜು ಮತ್ತು ಸಮುದ್ರ ಸಂಚಾರದಲ್ಲಿ ಸ್ಥಿರತೆ ಕಾಯ್ದುಕೊಂಡಿರುವ ಮಹತ್ವದ ಬೆಳವಣಿಗೆ ಕಂಡುಬಂದಿದೆ.

ಫೆಬ್ರವರಿ 28ರಿಂದ ಆರಂಭವಾದ ಸಂಘರ್ಷದ ಬಳಿಕ, ಭಾರತದೊಂದಿಗೆ ಸಂಪರ್ಕ ಹೊಂದಿರುವ 8 ಹಡಗುಗಳು ಹಾರ್ಮುಜ್ ಜಲಸಂಧಿಯನ್ನು ಯಶಸ್ವಿಯಾಗಿ ದಾಟಿವೆ ಎಂದು ವರದಿಯಾಗಿದೆ. ಈ ಮೂಲಕ ಯುದ್ಧಪೀಡಿತ ಪ್ರದೇಶದಲ್ಲೂ ಅತಿ ಹೆಚ್ಚು ಹಡಗುಗಳನ್ನು ಈ ಮಾರ್ಗದಿಂದ ಕಳುಹಿಸಿರುವ ದೇಶಗಳಲ್ಲಿ ಭಾರತ ಪ್ರಮುಖ ಸ್ಥಾನದಲ್ಲಿದೆ.

ಜಾಗತಿಕ ತೈಲ ಮತ್ತು ಅನಿಲ ಸಾಗಣೆಯ ಸುಮಾರು 20 ಪ್ರತಿಶತ ಈ ಜಲಮಾರ್ಗದ ಮೂಲಕವೇ ಸಾಗುವುದರಿಂದ, ಹಾರ್ಮುಜ್ ಜಲಸಂಧಿ ವಿಶ್ವದ ಅತ್ಯಂತ ಪ್ರಮುಖ ಕಡಲ ಚೆಕ್ ಪಾಯಿಂಟ್‌ಗಳಲ್ಲಿ ಒಂದಾಗಿದೆ. ಯುದ್ಧದ ನಂತರ ಇರಾನ್ ಹಲವು ದೇಶಗಳಿಗೆ ನಿರ್ಬಂಧ ಹೇರಿದರೂ, ಭಾರತ ಸೇರಿದಂತೆ ತನ್ನ ಸ್ನೇಹ ರಾಷ್ಟ್ರಗಳ ಹಡಗುಗಳಿಗೆ ಮಾರ್ಗವನ್ನು ಮುಕ್ತವಾಗಿರಿಸಿದೆ.

ಇಂದು ಮುಂಜಾನೆ ಎಲ್‌ಪಿಜಿ ಟ್ಯಾಂಕರ್ ಗ್ರೀನ್ ಸಾನ್ವಿ ಈ ಜಲಸಂಧಿಯನ್ನು ಯಶಸ್ವಿಯಾಗಿ ದಾಟಿ ಭಾರತತ್ತ ಪ್ರಯಾಣ ಆರಂಭಿಸಿದೆ. ಇದರಿಂದ ಯುದ್ಧದ ನಡುವೆಯೂ ಭಾರತದ ಇಂಧನ ಸರಬರಾಜಿಗೆ ದೊಡ್ಡ ಬಲ ಸಿಕ್ಕಂತಾಗಿದೆ. ಈಗಾಗಲೇ ಶಿವಾಲಿಕ್, ನಂದಾ ದೇವಿ, ಜಗ್ ಲಾಡ್ಕಿ, ಪೈನ್ ಗ್ಯಾಸ್, ಜಗ್ ವಸಂತ, ಃಫ ಟೈರ್, ಃಫ ಎಲ್ಮ್, ಗ್ರೀನ್ ಸಾನ್ವಿ ಸೇರಿದಂತೆ ಎಂಟು ಹಡಗುಗಳು ಸುರಕ್ಷಿತವಾಗಿ ಮಾರ್ಗ ದಾಟಿವೆ.

ಇನ್ನೊಂದೆಡೆ, ಸುಮಾರು 485 ಭಾರತೀಯ ನಾವಿಕರೊಂದಿಗೆ 15ಕ್ಕೂ ಹೆಚ್ಚು ಭಾರತೀಯ ಧ್ವಜ ಹೊಂದಿರುವ ಹಡಗುಗಳು ಇನ್ನೂ ಗಲ್ಫ್ ಪ್ರದೇಶದಲ್ಲೇ ಉಳಿದಿವೆ. ಇವುಗಳ ಸುರಕ್ಷಿತ ಸಂಚಾರಕ್ಕಾಗಿ ಭಾರತೀಯ ನೌಕಾಪಡೆ ಓಮನ್ ಕೊಲ್ಲಿ ಮತ್ತು ಅರೇಬಿಯನ್ ಸಮುದ್ರದಲ್ಲಿ ಸಕ್ರಿಯವಾಗಿ ಕಾವಲು ನಿಂತಿದೆ.

ಈ ಬೆಳವಣಿಗೆ ಭಾರತಕ್ಕೆ ಇಂಧನ ಭದ್ರತೆ ದೃಷ್ಟಿಯಿಂದ ಮಹತ್ವದ್ದಾಗಿದ್ದು, ಯುದ್ಧದ ಮಧ್ಯೆಯೂ ಸರಬರಾಜು ಸರಪಳಿ ನಿರಂತರವಾಗಿ ಮುಂದುವರಿಯುತ್ತಿದೆ ಎಂಬ ವಿಶ್ವಾಸ ಮೂಡಿಸಿದೆ.

# ಕಾಂಗ್ರೆಸ್ ಧನದಾಹದಿಂದ ಆತ್ಮನಿರ್ಭರ ಭಾರತಕ್ಕೆ ಕೊಡಲಿ ಪೆಟ್ಟು: ಪ್ರಹ್ಲಾದ್ ಜೋಶಿ

**ಹುಬ್ಬಳ್ಳಿ**

ಎಲೆಕ್ಟ್ರಿಕ್ ವಾಹನಗಳ ತೆರಿಗೆ ವಿನಾಯಿತಿ ಹಿಂಪಡೆದಿರುವುದು ರಾಜ್ಯ ಸರ್ಕಾರದ ಆರ್ಥಿಕ ದಿವಾಳಿತನದ ಸೂಚಕವಾಗಿದೆ. ಸಿಕ್ಕ ಸಿಕ್ಕಲ್ಲಿ ಹಣ ಹೊಂದಿಸಲು ಕೈ ಹಾಕುತ್ತಿದೆ. ಧನ ದಾಹದಿಂದ ಆತ್ಮನಿರ್ಭರ ಭಾರತಕ್ಕೆ ಕೊಡಲಿ ಪೆಟ್ಟು ಕೊಡುತ್ತಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆರೋಪಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆ ನೀತಿ, ಹಣ ಕ್ರೋಢೀಕರಣ ದಾಹ ಇದೀಗ ಎಲೆಕ್ಟ್ರಿಕ್ ವಾಹನಗಳನ್ನೂ ಬಿಟ್ಟಿಲ್ಲ. ಇದು ಸ್ವಾವಲಂಬಿ ಭಾರತದ ಕಾರ್ಯಾನುಷ್ಠಾನಕ್ಕೆ ತೊಡಕಾಗಿದೆ. ಇಲೆಕ್ಟ್ರಿಕ್ ವಾಹನಗಳಿಗೆ ತೆರಿಗೆ ವಿನಾಯಿತಿ ಹಿಂಪಡೆದು ಪರಿಸರ ಸ್ನೇಹಿ ವಾಹನಗಳನ್ನು ದೂರವಿಡುತ್ತಿದೆ. ಜನತೆಯನ್ನು ಮತ್ತೆ ಪೆಟ್ರೋಲ್,



ಡೀಸೆಲ್ ವಾಹನಗಳತ್ತ ಹಿಂತಿರುಗಲು ದಾರಿ ಮಾಡಿ ಕೊಟ್ಟಂತಾಗಿದೆ.

ಪಶ್ಚಿಮ ಏಷ್ಯಾ ಸಂಘರ್ಷದಿಂದ ಜಗತ್ತೇ ಗ್ಯಾಸ್, ಕಚ್ಚಾ ತೈಲ ಮತ್ತು ಪೆಟ್ರೋಲಿಯಂ ಉತ್ಪನ್ನಗಳಿಲ್ಲದೆ ತತ್ತರಿಸುತ್ತಿದೆ. ಭಾರತ ಪೆಟ್ರೋಲಿಯಂ ಉತ್ಪನ್ನಗಳ ಆಮದು ತಗ್ಗಿಸಲು ನವೀಕರಿಸಬಹುದಾದ ಇಂಧನ ಹಾಗೂ ಎಲೆಕ್ಟ್ರಿಕ್ ವಾಹನಗಳಿಗೆ ಹೆಚ್ಚಿನ ಆದ್ಯತೆ, ಅಗತ್ಯ ಪ್ರೋತ್ಸಾಹ ನೀಡುತ್ತಿದೆ. ಆದರೆ, ರಾಜ್ಯ ಕಾಂಗ್ರೆಸ್ ಸರ್ಕಾರ ಕೇಂದ್ರದ ಇಂಥ ಸ್ವಾವಲಂಬಿ ಯೋಜನೆಗಳನ್ನು ಹಾಳುಗೆಡಹುವ ಕೆಲಸ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ.

ಮೂರೂವರೆ ಲಕ್ಷ ಕೋಟಿ ರೂ. ಬಜೆಟ್ ಮಂಡಿಸಿದ ರಾಜ್ಯ ಸರ್ಕಾರ ಇದೀಗ ಕೇವಲ 250 ಕೋಟಿ ರೂ. ಆದಾಯ ಸಂಗ್ರಹಕ್ಕಾಗಿ ಇವಿ ವಾಹನಗಳ ಮೇಲಿನ ತೆರಿಗೆ ವಿನಾಯಿತಿ ಹಿಂಪಡೆದಿದೆ. ಇಷ್ಟು ಸಣ್ಣ ಮೊತ್ತ ಕ್ರೋಢೀಕರಣಕ್ಕೂ ಜನಸಾಮಾನ್ಯರ ಮೇಲೆ ಬರೆ ಎಳೆಯುತ್ತಿದೆ. ಪೆಟ್ರೋಲ್, ಡೀಸೆಲ್ ಮೇಲೆ ಹೆಚ್ಚು ತೆರಿಗೆ ಅಂದರೆ, ರಾಜ್ಯದ ಪಾಲಿನ ಕಮರ್ಷಿಯಲ್ ಟ್ಯಾಕ್ಸ್ ವಿಧಿಸಲು ಅವಕಾಶವಿದ್ದು, ಇದರಿಂದ ಆದಾಯ ಹೆಚ್ಚುತ್ತದೆಂಬ ಏಕ ಆಲೋಚನೆಯಲ್ಲಿ ಕರ್ನಾಟಕ ಸರ್ಕಾರ ಈ ರೀತಿ ವರ್ತಿಸುತ್ತಿದೆ ಎಂದಿದ್ದಾರೆ.

# ರಸ್ತೆ ಬದಿ ನಿಂತಿದ್ದ ಕಾರಿನ ಮೇಲೆ ಮಗುಚಿ ಬಿದ್ದ ಟೂರಿಸ್ಟ್ ಬಸ್: ಪ್ರಯಾಣಿಕರು ಗ್ರೇಟ್ ಎಸ್ಕೇಪ್

ಮಡಿಕೇರಿ ತಾಲೂಕಿನ ಮರಗೋಡು ಗ್ರಾಮದಲ್ಲಿ ಇಂದು ಮೈ ನಡುಗಿಸುವಂತಹ ಅಪಘಾತವೊಂದು ಸಂಭವಿಸಿದೆ.



ಪ್ರವಾಸಿಗರನ್ನು ಹೊತ್ತೊಯ್ಯುತ್ತಿದ್ದ ಬಸ್ ನಿಯಂತ್ರಣ ತಪ್ಪಿ ರಸ್ತೆ ಬದಿಯಲ್ಲಿದ್ದ ಕಾರಿನ ಮೇಲೆ ಉರುಳಿ ಬಿದ್ದಿದೆ. ಈ ಭೀಕರ ಘಟನೆಯಲ್ಲಿ ಕಾರಿನಲ್ಲಿದ್ದ ನಾಲ್ವರು ಪ್ರಯಾಣಿಕರು ಪವಾಡ ಸದೃಶ್ಯವಾಗಿ ಪ್ರಾಣಾಪಾಯದಿಂದ ಪಾರಾಗಿದ್ದು, ಸಾರ್ವಜನಿಕರಲ್ಲಿ ಅಚ್ಚರಿ ಮೂಡಿಸಿದೆ. ಪ್ರವಾಸಿ ಬಸ್ ಚಾಲಕ ಸುದೀಪ್ ಎಂಬುವವರ ಅತಿವೇಗ ಹಾಗೂ ನಿರ್ಲಕ್ಷ್ಯದ ಚಾಲನೆಯೇ ಈ ಅಪಘಾತಕ್ಕೆ ನೇರ ಕಾರಣ ಎಂದು ಹೇಳಲಾಗುತ್ತಿದೆ. ವೇಗವಾಗಿ ಬಂದ ಬಸ್ ಚಾಲಕನ ನಿಯಂತ್ರಣ ತಪ್ಪಿ, ಪಕ್ಕದಲ್ಲೇ ನಿಂತಿದ್ದ ಕಾರಿನ ಮೇಲೆ ಭಾರೀ ಸದ್ದಿನೊಂದಿಗೆ ಮಗುಚಿ ಬಿದ್ದಿದೆ. ಅಪಘಾತದ ತೀವ್ರತೆಗೆ ಕಾರು ಸಂಪೂರ್ಣ ಜಜ್ಜಲ್ಪಟ್ಟಿದ್ದರೂ, ಅದರೊಳಗಿದ್ದ ನಾಲ್ವರಿಗೆ ಕೇವಲ ಸಣ್ಣಪುಟ್ಟ ಗಾಯಗಳಾಗಿವೆ.

ವಿಷಯ ತಿಳಿಯುತ್ತಿದ್ದಂತೆಯೇ ಮಡಿಕೇರಿ ಗ್ರಾಮಾಂತರ ಠಾಣೆಯ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ.

ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಾಲಕ ಸುದೀಪ್ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳುವ ಸಾಧ್ಯತೆ ಇದೆ. ಸದ್ಯ ಸ್ಥಳೀಯರ ಸಹಕಾರದೊಂದಿಗೆ ವಾಹನಗಳನ್ನು ರಸ್ತೆಯಿಂದ ತೆರವುಗೊಳಿಸುವ ಕಾರ್ಯ ನಡೆದಿದೆ.

# ಕಳ್ಳತನ ಆರೋಪಿ ಸೆರೆ, 14 ಲಕ್ಷ ರೂ ಮೌಲ್ಯದ ಚಿನ್ನಾಭರಣ ವಶಕ್ಕೆ

**ಉಡುಪಿ**

ಬ್ರಹ್ಮಾವರ ಠಾಣಾ ವ್ಯಾಪ್ತಿಯಲ್ಲಿ ನಡೆದ ಮನೆ ಕಳ್ಳತನ ಪ್ರಕರಣದಲ್ಲಿ ಆರೋಪಿಯನ್ನು ಪೊಲೀಸರು ಸೆರೆ ಹಿಡಿದಿದ್ದು, 14 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಹಾಗೂ ನಗದು ವಶಕ್ಕೆ ಪಡೆಯಲಾಗಿದೆ.

ಆರೋಪಿಯನ್ನು ಬಾರಕೂರು ನಿವಾಸಿ ಪ್ರವೀಣ್ ಕುಮಾರ್ ಕೆ ಎಂಬಾತನನ್ನು ಬಂಧಿಸಲಾಗಿದೆ. ಆತನಿಂದ ಕಳವು ಸ್ವತ್ತಾದ 14 ಲಕ್ಷ ರೂ. ಮೂಲ್ಯದ ಚಿನ್ನಾಭರಣಗಳನ್ನು ಹಾಗೂ 7500 ರೂ. ನಗದನ್ನು ವಶಪಡಿಸಿಕೊಳ್ಳಲಾಗಿದೆ.

ಮಾರ್ಚ್ 6ರಂದು ಹೇರಾಡಿ ಗ್ರಾಮದ ಐಟಿಐ ಕಾಲೇಜಿನ ಬಳಿಯ ಮಂಜುನಾಥ್ ರಾವ್ ಎಂಬವರ ಮನೆಯಲ್ಲಿ ಕಳ್ಳತನಾಗಿತ್ತು. ಮನೆಗೆ ಬೀಗ ಹಾಕಿ ಬಾರಕೂರು ನಲ್ಲಿ ನಡೆಯುತ್ತಿದ್ದ ನಾಗಮಂಡಲ ಕಾರ್ಯಕ್ರಮಕ್ಕೆ ಹೋಗಿದ್ದಾಗ ಮನೆಯ ಎದುರು ಬಾಗಿಲು ಒಡೆದು ಬೆಡ್ ರೂಮ್ ನಲ್ಲಿರುವ ಕಪಾಟಿನ ಬೀಗ ಒಡೆದು ಚಿನ್ನಾಭರಣ ಕಳ್ಳತನ




ಮಾಡಲಾಗಿತ್ತು.

47 ಗ್ರಾಂನ ಚಿನ್ನದ ಮುತ್ತಿನ ಸರ ಮತ್ತು ಪೆಂಡೆಂಟ್, 32 ಗ್ರಾಂನ ಎರಡು ಚಿನ್ನದ ಬಳೆ, 6 ಗ್ರಾಂನ ಒಂದು ಜತೆ ಚಿನ್ನದ ಬೆಂಡೋಲೆ, 4 ಗ್ರಾಂನ ಚಿನ್ನದ ಉಂಗುರ, 3 ಗ್ರಾಂನ ಚಿನ್ನದ ಬೆಂಡೋಲೆ, ಬೆಳ್ಳಿಯ ಹರಿವಾಣ ಮತ್ತು ಕವಳಿಗೆ ಮತ್ತು ರೂ. 49000 ನಗದು ಹಣವನ್ನು ಕಳವು ಮಾಡಲಾಗಿತ್ತು. ಒಟ್ಟು 14,67,000 ರೂ ಮೌಲ್ಯದ ಸೊತ್ತು ಕಳವಾಗಿತ್ತು. ಈ ಬಗ್ಗೆ ಬ್ರಹ್ಮಾವರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಈ ಪ್ರಕರಣದ ತನಿಖೆಯನ್ನು ಬೆಳ್ಳಿಯಪ್ಪ, ಪೊಲೀಸ್ ಉಪಾಧೀಕ್ಷರು ಉಡುಪಿ ಉಪ ವಿಭಾಗ, ಉಡುಪಿ ರವರ ನಿರ್ದೇಶನದಂತೆ ಗೋಪಿಕೃಷ್ಣ, ಸಿ.ಪಿ.ಐ ಬ್ರಹ್ಮಾವರ, ಅಶೋಕ್ ಮಾಳಾಬಗಿ, ಪಿ.ಎಸ್.ಐ (ಕಾ&ಸು) ಬ್ರಹ್ಮಾವರ ಠಾಣೆ ಹಾಗೂ ಅಪರಾಧ ಪತ್ತೆ ಸಿಬ್ಬಂದಿಗಳಾದ ಕಿರಣ್, ಸಿದ್ದಪ್ಪ ಸಕನಳ್ಳಿ, ಸುರೇಶ್ ಬಾಬು, ಎ.ಎಸ್.ಐ ಕೃಷ್ಣಪ್ಪ, ವಿಶ್ವನಾಥ ಶೆಟ್ಟಿ, ಜಯಶೀಲಾ ಇವರುಗಳ ತಂಡ ನಡೆಸಿ ಆರೋಪಿಯನ್ನು ಬಂಧಿಸಿದ್ದಾರೆ. ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ.

# ಸ್ವರ್ಣರೇಖಾ ನದಿಯಲ್ಲಿ ಮೀನುಗಳ ಮಾರಣ ಹೋಮ: ನೀರಿನ ಪರೀಕ್ಷೆಯಲ್ಲಿ ಬಯಲಾಯ್ತು ಶಾಕಿಂಗ್ ವಿಷ್ಯ

ಜಾರ್ಖಂಡ್‌ನ ಜೆಮ್ಶೆಡ್‌ಪುರ ನಗರದ ಸ್ವರ್ಣರೇಖಾ ನದಿಯ ದಡದಲ್ಲಿ ಸಾವಿರಾರು ಮೀನುಗಳು ಸತ್ತ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಸ್ಥಳೀಯರು ಬೆಚ್ಚಿಬಿದ್ದಿದ್ದಾರೆ. ನದಿಯ ಹಲವೆಡೆ ಮೀನುಗಳು ತೇಲಿಬಂದ ದೃಶ್ಯಗಳು ಸಾರ್ವಜನಿಕರಲ್ಲಿ ಭೀತಿ ಮತ್ತು ಆಕ್ರೋಶ ಮೂಡಿಸಿವೆ.

ಈ ಘಟನೆಗೆ ಸಂಬಂಧಿಸಿದಂತೆ ಮಾಲಿನ್ಯ ನಿಯಂತ್ರಣ ಮಂಡಳಿ ನಡೆಸಿದ ಪ್ರಾಥಮಿಕ ಪರಿಶೀಲನೆಯಲ್ಲಿ ಗಂಭೀರ ಅಂಶಗಳು ಹೊರಬಿದ್ದಿವೆ. ನದಿ ನೀರಿನಲ್ಲಿನ ಆಮ್ಲಜನಕದ ಮಟ್ಟವು ತೀವ್ರವಾಗಿ ಇಳಿಕೆಯಾಗಿದ್ದು, ವಿಷಕಾರಿ ರಾಸಾಯನಿಕಗಳ ಪ್ರಮಾಣ ಹೆಚ್ಚಿರುವುದು ಮೀನುಗಳ ಸಾವಿಗೆ ಪ್ರಮುಖ ಕಾರಣ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.

# ಬಟ್ಟೆ ಬ್ಯಾಗ್ ಖರೀದಿ ಅಕ್ರಮದ ಮಾಹಿತಿ ಬಹಿರಂಗಪಡಿಸುವೆ: ಸಾ.ರಾ.ಮಹೇಶ್

**ಮೈಸೂರು**

ರೋಹಿಣಿ ಸಿಂಧೂರಿ ಅವರು ಮೈಸೂರು ಜಿಲ್ಲಾಧಿಕಾರಿ ಆಗಿದ್ದಾಗ ಬಟ್ಟೆ ಬ್ಯಾಗ್ ಖರೀದಿಯಲ್ಲಿ ನಡೆದಿರುವ ಅವ್ಯವಹಾರ ಪ್ರಕರಣಕ್ಕೆ ಸಂಬಂಧಿಸಿ ರೋಹಿಣಿ ಸಿಂಧೂರಿ ವಿರುದ್ಧ ತನಿಖೆಗೆ ಪೂರ್ವಾನುಮತಿ ನೀಡಲು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ ನೀಡಿದ್ದು, ಇದರಿಂದ ನ್ಯಾಯಾಂಗ ವ್ಯವಸ್ಥೆಯ ಮೇಲೆ ಜನ ಸಾಮಾನ್ಯರಿಗೆ ವಿಶ್ವಾಸ ಮೂಡಿಸಿದೆ ಎಂದು ಮಾಜಿ ಸಚಿವ ಸಾ.ರಾ.ಮಹೇಶ್ ಹೇಳಿದರು.

ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ರೋಹಿಣಿ ಸಿಂಧೂರಿ ಅವರ ಪ್ರಕರಣದಲ್ಲಿ ನ್ಯಾಯಾಲಯದ ತೀರ್ಪಿನ ಪೂರ್ಣಭಾಗ ಓದಿಲ್ಲ. ಮತ್ತಷ್ಟು ದಾಖಲೆಗಳನ್ನು ಸಂಗ್ರಹಿಸುತ್ತಿದ್ದೇನೆ. ಶನಿವಾರ ಅಥವಾ ಭಾನುವಾರ ದಾಖಲೆಗಳೊಂದಿಗೆ ಮಹತ್ವದ ವಿಚಾರ ಹಂಚಿಕೊಳ್ಳುತ್ತೇನೆ ಎಂದರು.

**ಏನಿದು ಪ್ರಕರಣ:**



2019–20ರಲ್ಲಿ ಜಿಲ್ಲಾಧಿಕಾರಿಯಾಗಿದ್ದ ರೋಹಿಣಿ ಸಿಂಧೂರಿ ಅವರ ಮೇಲೆ ಪರಿಸರ ಸ್ನೇಹಿ ಬಟ್ಟೆ ಬ್ಯಾಗ್ ಖರೀದಿ ಮಾಡುವಲ್ಲಿ ಕೋಟ್ಯಂತರ ರೂಪಾಯಿ ಅಕ್ರಮ ಎಸಗಿದ್ದರೆ ಎಂಬ ಆರೋಪ ಕೇಳಿ ಬಂದಿತ್ತು. ಬಟ್ಟೆ ಬ್ಯಾಗ್ ಖರೀದಿಸಲು 14.71 ಕೋಟಿ ರೂ.ಗೆ ಅನುಮೋದನೆ ನೀಡಿ–ದ್ದರು. ಆದರೆ, ಮಾರುಕಟ್ಟೆಯಲ್ಲಿ 13 ರೂ.ಗೆ ಲಭ್ಯವಿದ್ದ ಬ್ಯಾಗ್‌ಗೆ ಜಿಎಸ್‌ಟಿ ಸೇರಿ 52 ರೂಪಾಯಿಗೆ ಖರೀದಿಸಲು ಅನುಮತಿ ನೀಡಿ–ದ್ದರು. ಇದರಿಂದ ಸುಮಾರು 5 ರಿಂದ 7 ಕೋಟಿ ರೂಪಾಯಿ ನಷ್ಟ ಎದುರಾಗಿದೆ ಎಂಬ ಆರೋಪ ಕೇಳಿ ಬಂದಿತ್ತು. ಈ ಸಂಬಂಧ ಸಾರ್ವಜನಿಕರೊಬ್ಬರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ಆರೋಪ ಕೇಳಿ ಬಂದ ಹಿನ್ನೆಲೆ ರಾಜ್ಯ ಸರ್ಕಾರ ಇಲಾಖಾ ವಿಚಾರಣೆ ನಡೆಸಿ, ಜಿಲ್ಲಾಧಿಕಾರಿಗಳಿಗೆ ಕ್ಲೀನ್ ಚಿಟ್ ನೀಡಿತ್ತು. ಅಲ್ಲದೇ ಕ್ರಿಮಿನಲ್ ತನಿಖೆಗೆ ಅನುಮತಿ ನಿರಾಕರಿಸಿತ್ತು. ಆದರೆ ಈಗ ಅರ್ಜಿ ವಿಚಾರಣೆ ನಡೆದ ಹೈಕೋರ್ಟ್ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಪೀಠ ಬಟ್ಟೆ ಬ್ಯಾಗ್ ಖರೀದಿಯಲ್ಲಿ ನಡೆದಿರುವ ಅವ್ಯವಹಾರ ಪ್ರಕರಣವನ್ನು ತನಿಖೆ ನಡೆಸುವಂತೆ ಆದೇಶಿಸಿದೆ.

Volume: 1
Issue: 276
Bengaluru

# ಅನುಕ್ಷಣ

ಕನ್ನಡ ದಿನ ಪತ್ರಿಕೆ

PRGI: KNKAN/25/A0613

March 05,2026

ದಿನಾಂಕ: 05-04-2026 ಭಾನುವಾರ

ಬೆಲೆ: 5 ರೂ.



## ಇರಾನ್-ಇಸ್ರೇಲ್ ಯುದ್ಧದ ನಡುವೆ ಭಾರತದ ರಕ್ಷಣಾ ರಫ್ತು ಇತಿಹಾಸದಲ್ಲೇ ದಾಖಲೆಯ ಏರಿಕೆ!, ಖರೀದಿದಾರರು ಯಾರು?

**ನವದೆಹಲಿ:** ಇರಾನ್-ಇಸ್ರೇಲ್, ಅಮೆರಿಕ ಯುದ್ಧದ ನಡುವೆ ಭಾರತದ ರಕ್ಷಣಾ ರಫ್ತುಗಳು ಇತಿಹಾಸದಲ್ಲೇ ಅತಿ ಹೆಚ್ಚು ಮಟ್ಟ ತಲುಪಿದ್ದು, ಜಾಗತಿಕ ಶಸ್ತ್ರಾಸ್ತ್ರ ಮಾರುಕಟ್ಟೆಯಲ್ಲಿ ದೇಶದ ವಿಸ್ತರಿಸುತ್ತಿರುವ ಹಾದಿಯನ್ನು ಸ್ಪಷ್ಟಪಡಿಸಿದೆ.

# ಕೇರಳ ಅಭಿವೃದ್ಧಿಗಾಗಿ ಬಿಜೆಪಿಗೆ ಮತ ಹಾಕಿ

**ಪತ್ತನಂತಿಟ್ಟ:** ಕೇರಳದಲ್ಲಿ ಎಲ್‌ಡಿಎಫ್ ಸರ್ಕಾರವನ್ನು ಪದಚ್ಯುತಗೊಳಿಸುವುದಕ್ಕೆ ಕ್ಷಣಗಣನೆ ಪ್ರಾರಂಭವಾಗಿದೆ. ರಾಜ್ಯದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಅಧಿಕಾರಕ್ಕೆ ಬರಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಶನಿವಾರ ಹೇಳಿದ್ದಾರೆ

ಪತ್ತನಂತಿಟ್ಟ ಜಿಲ್ಲೆಯಲ್ಲಿ ನಡೆದ ಬಿಜೆಪಿ ನೇತೃತ್ವದ ಎನ್‌ಡಿಎ ರ‍್ಯಾಲಿಯಲ್ಲಿ ಮಾತನಾಡಿದ ಮೋದಿ, ರಾಜ್ಯದಲ್ಲಿ ಬಿಜೆಪಿ ಕಾರ್ಯಕರ್ತರು ಎಲ್‌ಡಿಎಫ್ ಆಡಳಿತಕ್ಕೆ ವಿದಾಯ ಹೇಳುವ ಬಲವಾದ ಮನಸ್ಥಿತಿಯನ್ನು ಹೊಂದಿದ್ದಾರೆ ಎಂದು ತಿಳಿಸಿದ್ದಾರೆ.



ಕ್ರಿಶ್ಚಿಯನ್ ಜನಸಂಖ್ಯೆ ಹೆಚ್ಚಿರುವ ಈಶಾನ್ಯ, ಗೋವಾದಲ್ಲಿ ಅಭಿವೃದ್ಧಿ ಸಾಧಿಸಿದಂತೆ ಕೇರಳದಲ್ಲೂ ಎನ್‌ಡಿಎ ಅಭಿವೃದ್ಧಿಪಡಿಸುತ್ತದೆ. ಕೇರಳವು ಅಗಾಧ ಸಾಮರ್ಥ್ಯವನ್ನು ಹೊಂದಿದ್ದರೂ, ಅಭಿವೃದ್ಧಿಯ ಓಟದಲ್ಲಿ ಇತರ ರಾಜ್ಯಗಳಿಗಿಂತ ಹಿಂದುಳಿದಿದೆ ಎಂದು ಮೋದಿ ಹೇಳಿದ್ದಾರೆ..

ಕಾಂಗ್ರೆಸ್ ನೇತೃತ್ವದ ಯುಪಿಎ ಆಡಳಿತಗಳಿಗಿಂತ ಎನ್‌ಡಿಎ ಸರ್ಕಾರ ಕೇರಳದ ಅಭಿವೃದ್ಧಿಗೆ ಐದು ಪಟ್ಟು ಹೆಚ್ಚು ಅನುದಾನ ನೀಡಿದೆ ಎಂದು ಮೋದಿ ಹೇಳಿದ್ದಾರೆ.

ಕೇರಳದ ಅಭಿವೃದ್ಧಿಯಲ್ಲಿ ಭ್ರಷ್ಟಾಚಾರ ಮತ್ತು ಕೋಮುವಾದ ಎರಡು ದೊಡ್ಡ ಅಡೆತಡೆಗಳಾಗಿದ್ದು, ಅವುಗಳನ್ನು ತೊಡೆದು ಹಾಕಲು ಎಲ್‌ಡಿಎಫ್ ಅನ್ನು ಸೋಲಿಸಬೇಕಾಗಿದೆ ಎಂದು ಅವರು ಕರೆ ನೀಡಿದ್ದಾರೆ.

## ಸಿಎಂ ಸಿದ್ದರಾಮಯ್ಯ ವಿರುದ್ಧ ನಾಲಿಗೆ ಹರಿಬಿಟ್ಟ ಪ್ರತಾಪ್ ಸಿಂಹ

# ಎಫ್‌ಐಆರ್ ದಾಖಲಿಸುವಂತೆ ಸುರ್ಜೇವಾಲ ಆಗ್ರಹ

**ಬೆಂಗಳೂರು:** ಬಾಗಲಕೋಟೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಗ್ಗೆ ಪ್ರತಾಪ್ ಸಿಂಹ ನೀಡಿರುವ ಹೀನಾಯ ಕಟ್ ಹೇಳಿಕೆ ಬಿಜೆಪಿಯ ನೀಚ ರಾಜಕಾರಣವನ್ನು ಮತ್ತೊಮ್ಮೆ ಬಟ್ಟಬಯಲು ಮಾಡಿದೆ ಎಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರು ಶನಿವಾರ ಮಾಜಿ ಸಂಸದನ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಈ ಸಂಬಂಧ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಸುರ್ಜೇವಾಲ ಅವರು, ಪ್ರತಾಪ್ ಸಿಂಹರ ಈ ಆಕ್ರೋಶ ಹತಾಶೆಯಿಂದ ಹುಟ್ಟಿದ್ದು ಎನ್ನುವುದು ಈಗ ಸ್ಪಷ್ಟ. ಹಿಂದುಳಿದ ಸಮುದಾಯದ ಅತ್ಯಂತ ಹಿರಿಯ ನಾಯಕರಾದ ಸಿದ್ದರಾಮಯ್ಯನವರನ್ನು ಅವಮಾನಿಸಲು ಬಿಜೆಪಿ ಉದ್ದೇಶಪೂರ್ವಕವಾಗಿ ಪ್ರತಾಪ್ ಸಿಂಹರನ್ನು ಬಳಸಿಕೊಳ್ಳುತ್ತಿದೆ ಎಂದು ಆರೋಪಿಸಿದ್ದಾರೆ.

ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿಗಳು ಮತ್ತು ಅಲ್ಪಸಂಖ್ಯಾತರನ್ನು ತಮ್ಮ ಮನುವಾದಿ ದೃಷ್ಟಿಕೋನದ ಅನುಸಾರ ಕೀಳಾಗಿ ಮತ್ತು ಅಧೀನರಾಗಿ ಕಾಣುತ್ತೇವೆ ಎಂಬ ಸಂದೇಶವನ್ನು ರವಾನಿಸುವ ಏಕೈಕ ಉದ್ದೇಶದ ಇದರ ಹಿಂದೆ ಇದೆ. ಇಂತಹ ನಡವಳಿಕೆ ಬಿಜೆಪಿಯಲ್ಲಿನ ವಿಚಾರ, ನೈತಿಕತೆ ಮತ್ತು ನಾಯಕತ್ವದ ಸಂಪೂರ್ಣ ದಿವಾಳಿತನವನ್ನು ಬಯಲು ಮಾಡುತ್ತದೆ ಎಂದಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಕೊಂದು ದೇಹವನ್ನು ಫ್ರಿಡ್ಜ್‌ನಲ್ಲಿ ತುಂಬುತ್ತೇವೆ ಎಂಬ ಹೇಯ ಬೆದರಿಕೆ ಸೇರಿದಂತೆ ಈ ಹಿಂದೆ ಇದೇ ವಿಭಜನಕಾರಿ ಶಕ್ತಿಗಳಿಂದ ಜೀವಬೆದರಿಕೆಗಳು ಕೂಡ ಬಂದಿವೆ. ಇದು ಒಬ್ಬ ವ್ಯಕ್ತಿಯ ಹುಚ್ಚಾಟವಲ್ಲ ಇದು ಬಿಜೆಪಿಯ ರಾಜಕೀಯ ಸಂಸ್ಕೃತಿಯೇ ಆಗಿದೆ. ಇದೇ ಪ್ರತಾಪ್ ಸಿಂಹ ಬಿಜೆಪಿ ಕೇಂದ್ರ ನಾಯಕತ್ವದ ಸೂಚನೆಯ ಮೇರೆಗೆ ಜನರಿಂದ ಆಯ್ಕೆಯಾದ ಕಾಂಗ್ರೆಸ್ ಕರ್ನಾಟಕ ಸರ್ಕಾರವನ್ನು ಒಮ್ಮೆಯಲ್ಲ, ಪದೇ ಪದೇ ತಾಲಿಬಾನ್ ಸರ್ಕಾರ ಎಂದು ಕರೆದವರು. ವಿಷಕಾರಿ ಭಾಷಣ ಹರಡುವುದರಲ್ಲಿ ಬಿಜೆಪಿ ನಾಯಕರು ಮರು ಅಪರಾಧಿಗಳು. ಮಾಜಿ ಸಂಸದ



ಅನಂತಕುಮಾರ್ ಹೆಗಡೆ ಕೇಂದ್ರ ಸಚಿವರಾಗಿದ್ದಾಗಲೇ ಸಚಿವ ದಿನೇಶ್ ಗುಂಡೂರಾವ್ ಅವರ ಪತ್ನಿಯನ್ನು ಬಹಿರಂಗವಾಗಿ ಅವಮಾನಿಸಿದರು. ಬಿಜೆಪಿ ಶಾಸಕ ಸಿ.ಟಿ. ರವಿ ಕರ್ನಾಟಕ ವಿಧಾನಪರಿಷತ್ತಿನ ಒಳಗೇ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರನ್ನು ಅವಮಾನಿಸಿ ಅತ್ಯಂತ ಕೆಳಮಟ್ಟಕ್ಕೆ ಇಳಿದರು. ಇತರ ಬಿಜೆಪಿ ನಾಯಕರು ವ್ಯಕ್ತಿಗಳನ್ನು, ಸಮುದಾಯಗಳನ್ನು ಮತ್ತು ಧರ್ಮಗಳನ್ನು ಅವಮಾನಿಸುವ, ಅಗೌರವಿಸುವ ಮತ್ತು ಹೀಯಾಳಿಸುವ ಹೇಳಿಕೆಗಳನ್ನು ನೀಡುವುದರಲ್ಲಿ ಮರು ಅಪರಾದಿಗಳಾಗಿದ್ದರೆ.

ನಿಂದನೆಯೇ ಬಿಜೆಪಿ ನಾಯಕರ ಮ್ಯಾಗ್ನಾ ಕಾರ್ಟಾ ಆಗಿರುವಾಗ, ಅವರಿಂದ ಅಭಿವೃದ್ಧಿ, ಪ್ರಗತಿ ಅಥವಾ ಸೌಹಾರ್ದದ ಭಾಷೆಯನ್ನು ನಿರೀಕ್ಷಿಸುವುದು ವ್ಯರ್ಥ. ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭೆ ಉಪಚುನಾವಣೆಗಳಲ್ಲಿ ಬಿಜೆಪಿಯ ಹತಾಶೆ ಜನರ ತಿರಸ್ಕಾರ ಮತ್ತು ಏಪ್ರಿಲ್ 9, 2026ರಂದು ಸನ್ನಿಹಿತ ಸೋಲಿನ ಮುನ್ಸೂಚನೆಯಿಂದ ಹುಟ್ಟಿದೆ. ಇದರಿಂದ ವಿಚಲಿತರಾದ ಮತ್ತು ಕನ್ನಡಿಗರ ಮೇಲೆ ಸಿಟ್ಟಿಗೆದ್ದ ರಾಜ್ಯ ಮತ್ತು ಕೇಂದ್ರ ಬಿಜೆಪಿ ನಾಯಕತ್ವ ಈಗ ಬಡವರ ಮತ್ತು ಶೋಷಿತರ ನಾಯಕತ್ವದ ಮೇಲೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಮೇಲೆ ನಿಂದನೆ ಮತ್ತು ಅವಮಾನ ಹೊರಿಸುವ ಕಾರ್ಯವನ್ನು ಪ್ರತಾಪ್ ಸಿಂಹರಂತಹ ವ್ಯಕ್ತಿಗಳಿಗೆ ವಹಿಸಿಕೊಟ್ಟಿದೆ ಎಂದು ಕಿಡಿ ಕಾರಿದ್ದಾರೆ.

ಪರಮ ವಿಪರ್ಯಾಸ ಎಂದರೆ ಬಿಜೆಪಿ ನಾಯಕತ್ವ ಮೊದಲು ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಆರು ವರ್ಷಗಳ ಕಾಲ ಪಕ್ಷದಿಂದ ಉಚ್ಚಾಟಿಸಲು ನಿರಾಕರಿಸಿತ್ತು. ಯತ್ನಾಳ್ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮತ್ತು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರನ್ನು ಬಹಿರಂಗವಾಗಿ ಭ್ರಷ್ಟ ಕುಟುಂಬ ಎಂದು ಕರೆಯುತ್ತಾರೆ. ಬಾಗಲಕೋಟೆ ವಿಧಾನಸಭೆಯಲ್ಲಿ ಬಿಜೆಪಿ ಮತ್ತು ಅದರ ಅಭ್ಯರ್ಥಿ ವೀರಣ್ಣ ಚರಂತಿಮಠ ಈಗ ಯತ್ನಾಳ್ ಅವರನ್ನೇ ತಮ್ಮ ಸ್ಟಾರ್ ಪ್ರಚಾರಕರನ್ನಾಗಿ ನೇಮಿಸಿಕೊಂಡಿದ್ದಾರೆ. ಸಾವಿರ ಹೋಳಾಗಿ ಒಡೆದಿರುವ, ಸ್ವಂತ ಮನೆಯನ್ನೇ ಸರಿ ಮಾಡಿಕೊಳ್ಳಲಾಗದ ಪಕ್ಷ ಈಗ ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿಗಳು ಮತ್ತು ಅಲ್ಪಸಂಖ್ಯಾತರನ್ನು ಹಾಗೂ ಅವರ ನಾಯಕರಾದ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಅವಮಾನಿಸುತ್ತಿದೆ.

ಕರ್ನಾಟಕಕ್ಕೆ ಪ್ರಗತಿಪರ ಚಿಂತನೆ, ವೈಜ್ಞಾನಿಕ ಮನೋಭಾವ, ಸರ್ವಧರ್ಮ ಸಮಭಾವ ಮತ್ತು ಸಾಮಾಜಿಕ ಸೌಹಾರ್ದದ ಹೆಮ್ಮೆಯ ಪರಂಪರೆ ಇದೆ. ರಾಜಕಾರಣವನ್ನು ಚರಂಡಿಗೆ ಎಳೆಯಲು ಹೊರಟ ಬಿಜೆಪಿ ನಾಯಕರ ಹಿಂದೆ ಸ್ವಾಭಿಮಾನಿ ಕನ್ನಡಿಗರು ಹೋಗುವುದಿಲ್ಲ. ಪ್ರತಾಪ್ ಸಿಂಹ ವಿರುದ್ಧ ಎಫ್‌ಐಆರ್ ದಾಖಲಿಸಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿರುವ ಸುರ್ಜೇವಾಲ ಅವರು,

ಬಿಜೆಪಿ ಮತ್ತು ಅದರ ನಾಯಕರು ಕ್ಷಮೆ ಕೇಳದಿದ್ದರೆ, ಬಡವರು ಮತ್ತು ತುಳಿತಕ್ಕೊಳಗಾದವರು ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಉಪಚುನಾವಣೆಗಳಲ್ಲಿ ಬಿಜೆಪಿಗೆ ತಕ್ಕ ಪಾಠ ಕಲಿಸುತ್ತಾರೆ ಎಂದು ಹೇಳಿದ್ದಾರೆ.

## ಬೆಂಗಳೂರು ಉಪನಗರ ರೈಲು ಯೋಜನೆ ವಿಳಂಬಕ್ಕೆ

# ರಾಜ್ಯ ಸರ್ಕಾರವೇ ಕಾರಣ:ಅಶ್ವಿನಿ ವೈಷ್ಣವ್

**ಬೆಂಗಳೂರು:** ಬೆಂಗಳೂರು ಉಪನಗರ ರೈಲು ಯೋಜನೆ ವಿಳಂಬಕ್ಕೆ ರಾಜ್ಯ ಸರ್ಕಾರವೇ ಕಾರಣ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಹೇಳಿದ್ದಾರೆ.

ಲೋಕಸಭೆಯಲ್ಲಿ ಈ ಕುರಿತು ಮಾಹಿತಿ ನೀಡಿರುವ ಅವರು, ಬೆಂಗಳೂರು ಉಪನಗರ ರೈಲು ಯೋಜನೆ ವಿಳಂಬಕ್ಕೆ ರಾಜ್ಯ ಸರ್ಕಾರದ ಭೂಸ್ವಾಧೀನ ಪ್ರಕ್ರಿಯೆಯೇ ಪ್ರಮುಖ ಕಾರಣ ಎಂದು ಹೇಳಿದರು.

ಬೆಂಗಳೂರು ಉಪನಗರ ರೈಲು ಯೋಜನೆಯ (ಬಿಎಸ್‌ಆರ್‌ಪಿ) ಕಾರಿಡಾರ್ -4 (ಹೀಲಲಿಗೆರಾಜನಕುಂಟೆ) ಯೋಜನೆಗೆ ಅಗತ್ಯವಿರುವ 57 ಎಕರೆ ಭೂಮಿಯಲ್ಲಿ ರಾಜ್ಯ ಸರ್ಕಾರದ ಅಧೀನದಲ್ಲಿರುವ ರೈಲ್ ಇನ್ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಕಂಪನಿ (ಕರ್ನಾಟಕ) ಲಿಮಿಟೆಡ್ (ಕೆ-ರೈಡ್) ಕೇವಲ 7.8 ಎಕರೆ ಭೂಮಿಯನ್ನು ಮಾತ್ರ ವಶಪಡಿಸಿಕೊಂಡಿದೆ. ಇದೇ ಕಾರಣದಿಂದ ಯೋಜನೆ ವಿಳಂಬವಾಗುತ್ತಿದೆ ಎಂದು ತಿಳಿಸಿದ್ದಾರೆ.

148.17 ಕಿಮೀ ಉದ್ದದ ಈ ಮಹತ್ವಾಕಾಂಕ್ಷಿ ಯೋಜನೆಗೆ ರೂ.15,767 ಕೋಟಿ ವೆಚ್ಚ



ಅಂದಾಜಿಸಲಾಗಿದ್ದು, ಇದರಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತಲಾ 20% ಹೂಡಿಕೆ ಮಾಡುತ್ತಿವೆ. ಉಳಿದ 60% ಹಣವನ್ನು ಸಾಲದ ಮೂಲಕ ಸಂಗ್ರಹಿಸಲಾಗುತ್ತಿದೆ. ಈಗಾಗಲೇ ಈ ಯೋಜನೆಗೆ ರೂ.2,659 ಕೋಟಿ ವೆಚ್ಚವಾಗಿದೆ ಎಂದು ಮಾಹಿತಿ ನೀಡಿದರು.

ಕೆಎಸ್‌ಆರ್ ಬೆಂಗಳೂರು ನಗರ ಮತ್ತು ದೇವನಹಳ್ಳಿ (41.4 ಕಿಮೀ) ನಡುವಿನ ಕಾರಿಡಾರ್-1 (ಸಂಪಿಗೆ) ಗಾಗಿ ಜೋಡಣೆ ಯೋಜನೆಗಳನ್ನು ಅನುಮೋದಿಸಲಾಗಿದೆ. ಭೂಸ್ವಾಧೀನ ಪ್ರಕ್ರಿಯೆಯನ್ನು ರಾಜ್ಯ ಸರ್ಕಾರ ಪ್ರಾರಂಭಿಸಿದ್ದು, ಸಿಗ್ನಲಿಂಗ್ ಮತ್ತು ಟೆಲಿಕಮ್ಯುನಿಕೇಶನ್ ಸೇರಿದಂತೆ ವಿದ್ಯುತ್ ವ್ಯವಸ್ಥೆಗಳ ಸ್ಥಳಾಂತರ ಕಾರ್ಯವೂ ನಡೆಯುತ್ತಿದೆ ಎಂದು ಹೇಳಿದರು.

ಬೈಯ್ಯಪ್ಪನಹಳ್ಳಿಚಿಕ್ಕಬಾಣಾವರ (25 ಕಿಮೀ) ಕಾರಿಡಾರ್‌ನಲ್ಲಿ ಭೂಸ್ವಾಧೀನ ಪೂರ್ಣಗೊಂಡಿದ್ದು, ನಿಲ್ದಾಣ ನಿರ್ಮಾಣಕ್ಕಾಗಿ ಪ್ರತ್ಯೇಕ ಒಪ್ಪಂದಗಳನ್ನು ನೀಡಲಾಗಿದೆ. ಕೆಂಗೇರಿವೈಟ್‌ಫೀಲ್ಡ್ (35.5 ಕಿಮೀ) ಮಾರ್ಗದಲ್ಲಿ ಭೂಸ್ವಾಧೀನ ಪ್ರಕ್ರಿಯೆ ಆರಂಭವಾಗಿದೆ. ಇದೇ ವೇಳೆ 46 ಕಿಮೀ ಉದ್ದದ ಹೀಲಲಿಗೆರಾಜನಕುಂಟೆ ಮಾರ್ಗದಲ್ಲಿ ಭೂಸ್ವಾಧೀನ ಪ್ರಕ್ರಿಯೆ ಇನ್ನೂ ಮುಂದುವರಿದಿದ್ದು, ಇದು ಯೋಜನೆಗೆ ದೊಡ್ಡ ಸವಾಲಾಗಿ ಪರಿಣಮಿಸಿದೆ ಎಂದು ಸಚಿವರು ತಿಳಿಸಿದರು.

## ಸಿಎಂ ಭರವಸೆ: ಎರಡೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲ್ಲಲಿದೆ

# ಬಿಜೆಪಿಯವರಿಗೆ ಸೋಲಿನ ಭಯ



ಸಿದ್ದರಾಮಯ್ಯ ಸಾಲ ಮಾಡಿದ್ದಾರೆ ಎಂದು ಬಿಜೆಪಿ ಅಪಪ್ರಚಾರ ಮಾಡುತ್ತಿದೆ. ಆರ್ಥಿಕ ಹೊಣೆಗಾರಿಕೆ ಕಾಯ್ದೆಯನ್ನು ಬಿಜೆಪಿ ಸರಿಯಾಗಿ ಓದಿಕೊಳ್ಳಬೇಕು. ರಾಜ್ಯಗಳು ಆರ್ಥಿಕ ಸಂಕಷ್ಟದಲ್ಲಿದ್ದಾಗ 2002 ರಲ್ಲಿ ಜಾರಿಯಾದ ಈ ಕಾಯ್ದೆಯ ಪ್ರಕಾರ ಮೂರು ಮಾನದಂಡಗಳನ್ನು ಈಡೇರಿಸಬೇಕು. ಆರ್ಥಿಕ ಕೊರತೆ ಜಿಡಿಪಿಯ ಶೇ.3ರಷ್ಟು ಒಳಗಿರಬೇಕು. 33 ಲಕ್ಷದ 5500 ಲಕ್ಷ ಕೋಟಿ ಪೈಕಿ ಶೇ.25ರಷ್ಟು ಸಾಲವಿರಬೇಕು. ಬಿಜೆಪಿ ಮತ್ತೊಮ್ಮೆ ಬಜೆಟ್ ಪುಸ್ತಕ ಓದಿಕೊಳ್ಳಲಿ. ಜಿಡಿಪಿಐ ಶೇಕಡ 25ಕ್ಕಿಂತ ಸಾಲ ಹೆಚ್ಚಾಗಬಾರದು. ನಮ್ಮ ಸಾಲ 24.94 ರಲ್ಲಿದೆ. ಹೀಗಾಗಿ ಸಾಲ ಮಿತಿಮೀರಿಲ್ಲ.

**-ಸಿದ್ದರಾಮಯ್ಯ**
ಮುಖ್ಯಮಂತ್ರಿ

**ಬಾಗಲಕೋಟೆ :** ಕಾಂಗ್ರೆಸ್ ಸರ್ಕಾರದ ವಿರುದ್ಧ ಅಪಪ್ರಚಾರ ಮಾಡುತ್ತಿರುವ ಬಿಜೆಪಿಯವರಿಗೆ ಸೋಲಿನ ಭಯ ಕಾಡುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಶನಿವಾರದಂದು ಬಾಗಲಕೋಟೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಾಗಲಕೋಟೆ ಉಪಚುನಾವಣಾ ಪ್ರಚಾರ ಕಾರ್ಯ ಉತ್ತಮವಾಗಿ ನಡೆಯುತ್ತಿದ್ದು, ನಿರೀಕ್ಷೆಗೂ ಮೀರಿ ಜನಸ್ಪಂದನೆ ದೊರೆತಿದೆ. ಎಲ್ಲೆಡೆ ಅಭೂತಪೂರ್ವ ಸ್ಪಂದನೆ ಸಿಗುತ್ತಿದ್ದು, ಎರಡೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲ್ಲಲಿದೆ ಎಂದು ಮುಖ್ಯಮಂತ್ರಿಗಳು ಭರವಸೆ ವ್ಯಕ್ತಪಡಿಸಿದರು.

ಕಾಂಗ್ರೆಸ್ ಸರ್ಕಾರದ ಕಾರ್ಯಕ್ರಮಗಳು ಬಡವರಿಗಾಗಿ ರೂಪಿಸಿಸಲ್ಪಟ್ಟಿವೆ. ಎಲ್ಲಾ ಜಾತಿ, ಧರ್ಮ, ಭಾಷೆಗಳಿಗೆ ಸೇರಿದ ಜನರಿಗೆ ಕಾರ್ಯಕ್ರಮಗಳನ್ನು ಕೊಟ್ಟಿದ್ದೇವೆ. ಬಿಜೆಪಿ ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುತ್ತಿದ್ದು, ಗ್ಯಾರಂಟಿ ಯೋಜನೆಗಳು ಸಾಮಾಜಿಕ ಬದ್ಧತೆಯನ್ನು ಒದಗಿಸುವ ಹೂಡಿಕೆಯಾಗಿದೆ. ಇದೂ ಕೂಡ ಅಭಿವೃದ್ಧಿಯೇ ಎಂದರು.

ಅಭಿವೃದ್ಧಿಯೆಂದರೆ ಕೇವಲ ರಸ್ತೆ, ಸೇತುವೆ, ಕಟ್ಟಡಗಳು ಮಾತ್ರವಲ್ಲ. ಆರ್ಥಿಕ ಹಾಗೂ ಸಾಮಾಜಿಕ ಭದ್ರತೆ ಒದಗಿಸುವುದು ಕೂಡ ಆಗಿದೆ ಎಂದು ಹೇಳಿದರು.

ಸಾಮಾಜಿಕ ಯೋಜನೆಗಳನ್ನು ಘೋಷಿಸಿದ ಮೇಲೆ ಬಿಜೆಪಿ ಅಂದಿನಿಂದ ಇಂದಿನವರೆಗೆ ವಿರೋಧಿಸುತ್ತಲೇ ಬಂದಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಸೇರಿದಂತೆ ಎಲ್ಲರೂ ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂದು ಹೇಳಿಕೊಂಡು ಬಂದಿದ್ದಾರೆ. ಕಳೆದ ಮೂರು ವರ್ಷಗಳಿಂದ ಗ್ಯಾರಂಟಿ ಯೋಜನೆಗಳು ಜಾರಿಯಲ್ಲಿದ್ದು 2026ರ ಮಾ.24ರವರೆಗೆ 1.31 ಲಕ್ಷ ಕೋಟಿ ರೂ.ಗಳನ್ನು ಗ್ಯಾರಂಟಿಗಳಿಗೆ ಕೊಟ್ಟಿದ್ದೇವೆ ಎಂದು ತಿಳಿಸಿದರು.

ಇದರ ಜೊತೆಗೆ, ನೀರಾವರಿ, ಲೋಕೋಪಯೋಗಿ, ಗ್ರಾಮೀಣಾಭಿವೃದ್ಧಿ, ಕುಡಿಯುವ ನೀರು, ಪೊಲೀಸ್ ವ್ಯವಸ್ಥೆಗೆ ವೆಚ್ಚ, ಎಸ್ ಸಿ ಎಸ್ ಪಿ/ಟಿ ಎಸ್ ಪಿ ಯೋಜನೆಗಳಿಗೆ ವೆಚ್ಚ ಮಾಡುವುದನ್ನು ಕಡಿಮೆ ಮಾಡಿಲ್ಲ. ಕಳೆದ ವರ್ಷದಲ್ಲಿ 42,000 ಕೋಟಿ ರೂ. ವೆಚ್ಚ ಮಾಡಿದ್ದರೆ, ಈ ವರ್ಷ 44,000 ಕೋಟಿಗೂ ಹೆಚ್ಚು ವೆಚ್ಚ ಮಾಡಲಾಗುತ್ತಿದೆ. ಅಭಿವೃದ್ಧಿ ಕೆಲಸಗಳ್ಯಾವುವೂ ಕುಂಠಿತವಾಗಿಲ್ಲ ಎಂದರು.

### ಆರ್ಥಿಕ ಶಿಸ್ತು ಕಾಪಾಡಿಕೊಂಡಿದ್ದೇವೆ

ಯಾವುದೇ ರಾಜ್ಯ ಸಿಕ್ಕಾಪಟ್ಟೆ ಸಾಲ ಮಾಡಲು ಸಾಧ್ಯವಿಲ್ಲ. ಇಷ್ಟೇ ಸಾಲ ಕೂಡಬೇಕೆಂದು ಕೇಂದ್ರ ಸರ್ಕಾರದ ಆರ್ಥಿಕ ಇಲಾಖೆ ನಿಗದಿ ಮಾಡುತ್ತದೆ. ಈ ವಿಷಯ ಬಿಜೆಪಿಗೆ ತಿಳಿದಿದೆಯೋ ಇಲ್ಲವೋ ಎನ್ನುವುದು ಗೊತ್ತಿಲ್ಲ. ಸಾಲ ಮಾಡಿದ್ದೇನೆ ಎನ್ನುವುದು ಹಸಿ ಸುಳ್ಳು. ಆರ್ಥಿಕ ಹೊಣೆಗಾರಿಕೆ ಕಾಯ್ದೆಯ ಮಾನದಂಡಗಳನ್ನು ಮೀರಿಲ್ಲ. ಆರ್ಥಿಕ ಶಿಸ್ತು ಕಾಪಾಡಿಕೊಂಡಿದ್ದೇವೆ ಎಂದರು.

## ಸಿಕ್ಕ ಸಿಕ್ಕಲ್ಲಿಂದ ಐಪಿಎಲ್ ಟಿಕೆಟ್ ಖರೀದಿ ಮಾಡುವ ಮುನ್ನ ಎಚ್ಚರ! ಲಕ್ಷಾಂತರ ರೂ. ಕಳೆದುಕೊಳ್ಳುವಿರಿ

**ಬೆಂಗಳೂರು:** ನಗರದಲ್ಲಿ ಐಪಿಎಲ್ ಟಿಕೆಟ್ ಕ್ರೇಜ್ ಎಲ್ಲೆಡೆ ಹಬ್ಬಿದೆ. ತವರು ನೆಲದಲ್ಲಿ ತಮ್ಮ ಇಷ್ಟದ ಆಟಗಾರರ ಮ್ಯಾಚ್ ನೋಡಲು ಎಲ್ಲರಿಗೂ ಆಸೆಯಿದೆ. ಆದರೆ ಯಾವುದೋ ಅನಧಿಕೃತ ಆನ್‌ಲೈನ್ ಪ್ಲಾಟ್‌ಫಾರ್ಮ್‌ಗಳಲ್ಲಿ ಟಿಕೆಟ್ ಖರೀದಿಗೆ ಮುಂದಾದರೆ ಮೋಸ ಹೋಗಬೇಕಾಗುತ್ತದೆ. ಇಂತದ್ದೇ ಮೋಸದ ಜಾಲಕ್ಕೆ ಸಿಲುಕಿ ಬೆಂಗಳೂರಿನ ಓರ್ವ ಟೆಕ್ಕಿ ಹಣ ಕಳೆದುಕೊಂಡ ಘಟನೆ ಬೆಳಕಿಗೆ ಬಂದಿದ್ದು, ಕ್ರಿಕೆಟ್ ಪ್ರೇಮಿಗಳಲ್ಲಿ ಎಚ್ಚರಿಕೆಯ ಗಂಟೆಯಾಗಿದೆ.




### ಇನ್‌ಸ್ಟಾಗ್ರಾಮ್‌ನಲ್ಲಿ ಪರಿಚಯವಾದ ವ್ಯಕ್ತಿ

ಬಿ.ನಾರಾಯಣಪುರ ನಿವಾಸಿಯಾದ 25 ವರ್ಷದ ಟೆಕ್ಕಿ ಒಬ್ಬರು ಆನ್‌ಲೈನ್ ಮೋಸಕ್ಕೆ ಒಳಗಾಗಿ 1.46 ಲಕ್ಷ ರೂ. ಕಳೆದುಕೊಂಡಿದ್ದರ ಬಗ್ಗೆ ಮಹದೇವಪುರ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಇನ್‌ಸ್ಟಾಗ್ರಾಮ್ ನಲ್ಲಿ ಪರಿಚಯವಾದ ವ್ಯಕ್ತಿ ಟಿಕೆಟ್ ಮಾರಾಟಗಾರನಂತೆ ನಟಿಸಿ ವಂಚಿಸಿದ್ದಾನೆ ಎಂದು ಆರೋಪಿಸಿದ್ದಾರೆ.

ತನ್ನನ್ನು ಎಂ. ಚಿನ್ನಸ್ವಾಮಿ ಕ್ರೀಡಾಂಗಣದ ಟಿಕೆಟ್ ಕೌಂಟರ್ ಹಿರಿಯ ಮೇಲ್ವಿಚಾರಕ ಸುಮಿತ್ ಬಿಸ್ವಾಲ್ ಎಂದು ಪರಿಚಯಿಸಿಕೊಂಡ ಆರೋಪಿಯು, ಐಪಿಎಲ್ ಪಂದ್ಯಕ್ಕೆ ಟಿಕೆಟ್‌ಗಳ ಜೊತೆಗೆ ಊಟದ ಕೂಪನ್‌ಗಳು ಮತ್ತು ವಿಶೇಷ ಸೌಲಭ್ಯಗಳನ್ನು ಒದಗಿಸುವುದಾಗಿ ನಂಬಿಕೆ ಮೂಡಿಸಿದ್ದ. ಆರಂಭದಲ್ಲಿ ಎರಡು ಟಿಕೆಟ್‌ಗಳಿಗೆ 3,700 ರೂ. ದರ ನಿಗದಿ ಮಾಡಿದ್ದರೂ, ನಂತರ ಭದ್ರತಾ ಠೇವಣಿ, ಹೆಚ್ಚುವರಿ ಐಡಿ ಕಾರ್ಡ್ ಹಾಗೂ ಫುಡ್ ಕೂಪನ್ ಹೆಸರಿನಲ್ಲಿ ಹಂತ ಹಂತವಾಗಿ ಹಣ ಕೇಳಿದ್ದ. ಪಂದ್ಯದ ದಿನ ಗೇಟ್ ನಂ.10 ಬಳಿ ಬರಲು ಹೇಳಿ, ನಕಲಿ ಇಮೇಲ್ ದೃಢೀಕರಣವನ್ನೂ ಕಳುಹಿಸಿದ್ದ ಎಂದು ನೊಂದ ವ್ಯಕ್ತಿ ಹೇಳಿದ್ದಾರೆ.

### ಟಿಕೆಟ್ ಕೊಡಲಿಲ್ಲ, ದುಡ್ಡೂ ಹಿಂದಿರುಗಿಸಲಿಲ್ಲ

ಆರೋಪಿಯ ಮಾತನ್ನು ನಂಬಿದ ವ್ಯಕ್ತಿ ತನ್ನ ಖಾತೆಯ ಜೊತೆಗೆ ತಾಯಿಯ ಖಾತೆಯಿಂದಲೂ ಯುಪಿಐ ಮೂಲಕ ಹಣ ವರ್ಗಾವಣೆ ಮಾಡಿದ್ದು, ಒಟ್ಟು 1.46 ಲಕ್ಷ ರೂ.ಪಾವತಿಸಿರುವುದಾಗಿ ಹೇಳಿದ್ದಾರೆ. ಹಣ ಪಡೆದ ಬಳಿಕ ಟಿಕೆಟ್‌ಗಳನ್ನು ನೀಡಿಲ್ಲ, ಹಣವನ್ನೂ ಹಿಂದಿರುಗಿಸಿಲ್ಲ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಭಾರತಕ್ಕೆ ಬರಬೇಕಿದ್ದ ಇರಾನ್ ತೈಲ ಹಡಗು

# ಏಕಾಏಕಿ ಚೀನಾಗೆ ರೀ-ರೂಟ್



**ನವದೆಹಲಿ:** ಕಚ್ಚಾ ತೈಲ ಆಮದುಗೆ ಸಂಬಂಧಿಸಿದಂತೆ ಇರಾನ್‌ನೊಂದಿಗೆ ಯಾವುದೇ ಪಾವತಿ ಸಮಸ್ಯೆಗಳಿಲ್ಲ ಮತ್ತು ಸಂಸ್ಕರಣಾಗಾರರು ಆ ದೇಶದಿಂದ ಮತ್ತು ಇತರ ಜಾಗತಿಕ ಪೂರೈಕೆದಾರರಿಂದ ತೈಲ ಪಡೆಯುವುದನ್ನು ಮುಂದುವರಿಸಿದ್ದಾರೆ ಎಂದು ಕೇಂದ್ರ ಸರ್ಕಾರ ಶನಿವಾರ ಹೇಳಿದೆ.

ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ, ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ, ಇರಾನಿನ ಕಚ್ಚಾ ತೈಲವನ್ನು ಸಾಗಿಸುತ್ತಿದ್ದ ತೈಲ ಟ್ಯಾಂಕರ್, ಭಾರತಕ್ಕೆ ಬರುವಾ ಮಾರ್ಗ ಮಧ್ಯದಲ್ಲಿಯೇ ಚೀನಾಗೆ ಮಾರ್ಗ ಬದಲಾಯಿಸಿದೆ ಎಂಬ ವರದಿಗಳನ್ನು ಸ್ಪಷ್ಟವಾಗಿ ತಳ್ಳಿಹಾಕಿದೆ.

ಪಾವತಿ ಅಡಚಣೆಗಳಿಂದಾಗಿ ಈ ಹಿಂದೆ ಗೊತ್ತುಪಡಿಸಲಾದ ಗಮ್ಯಸ್ಥಾನ ಗುಜರಾತ್‌ನ ವಾಡಿನಾರ್ ಬದಲು ಚೀನಾಗೆ ತಿರುಗಿಸಲಾಗಿದೆ ಎಂಬ ವರದಿ ಅವಾಸ್ತವಿಕ ಮತ್ತು ವಾಸ್ತವಿಕವಾಗಿ ತಪ್ಪು ಎಂದು ಹೇಳಿರುವ ಸಚಿವಾಲಯ, ಇರಾನಿನ ಕಚ್ಚಾ ತೈಲ ಆಮದುಗಳಿಗೆ ಯಾವುದೇ ಪಾವತಿ ಅಡಚಣೆಗಳಿಲ್ಲ ಎಂದು ಸ್ಪಷ್ಟಪಡಿಸಿದೆ.

ಭಾರತವು 40ಕ್ಕಿಂತ ಹೆಚ್ಚು ದೇಶಗಳಿಂದ ಕಚ್ಚಾ ತೈಲವನ್ನು ಆಮದು ಮಾಡಿಕೊಳ್ಳುತ್ತದೆ. ಕಂಪನಿಗಳು ವಾಣಿಜ್ಯ ಪರಿಗಣನೆಗಳ ಆಧಾರದ ಮೇಲೆ ವಿಭಿನ್ನ ಮೂಲಗಳು ಮತ್ತು ಭೌಗೋಳಿಕ ಪ್ರದೇಶಗಳಿಂದ ತೈಲವನ್ನು ಪಡೆಯಬಹುದು ಎಂದು ಸಚಿವಾಲಯ ತಿಳಿಸಿದೆ.

2002 ರಲ್ಲಿ ನಿರ್ಮಿಸಲಾದ ಮತ್ತು 2025 ರಲ್ಲಿ ಅಮೆರಿಕ ಅನುಮೋದಿಸಿದ ಅಫ್ರಾಮ್ಯಾಕ್ಸ್ ಟ್ಯಾಂಕರ್ ಪಿಂಗ್ ಶುನ್, ಭಾರತದಿಂದ ಮಾರ್ಗ ಬದಲಾಯಿಸಿ ಚೀನಾದ ಕಡೆಗೆ ಹೊರಟಿದೆ ಎಂದು ಕೆಪ್ಲರ್ ಹಡಗು ಟ್ರ್ಯಾಕಿಂಗ್ ಸಂಸ್ಥೆ ತಿಳಿಸಿರುವುದಾಗಿ ಮಾಧ್ಯಮಗಳು ವರದಿ ಮಾಡಿದ್ದವು.

## ಎಸ್‌ಎಸ್‌ಎಲ್‌ಸಿ ತೃತೀಯ ಭಾಷೆಗೆ ಗ್ರೇಡ್ ವಿವಾದ

# ರಾಜ್ಯಪಾಲರ ನಿಲುವಿಗೆ ಕರವೇ ಕೆಂಡ



**ಬೆಂಗಳೂರು:** ಎಸ್‌ಎಸ್‌ಎಲ್‌ಸಿ ಹಿಂದಿ ಪರೀಕ್ಷೆಗೆ ಅಂಕಗಳ ಬದಲು ಗ್ರೇಡ್ ನೀಡುವ ರಾಜ್ಯ ಸರ್ಕಾರದ ನಿರ್ಧಾರ ಮರುಪರಿಶೀಲಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿಗೆ ರಾಜ್ಯಪಾಲರು ಪತ್ರ ಬರೆದಿರುವ ವಿಚಾರವೀಗ ಕರ್ನಾಟಕ ರಕ್ಷಣಾ ವೇದಿಕೆಯ ಆಕ್ರೋಶಕ್ಕೆ ಕಾರಣವಾಗಿದೆ. ಈ ಸಂಬಂಧ ಸೋಮವಾರ ಬೆಳಗ್ಗೆ 11 ಗಂಟೆಗೆ ಲೋಕಭವನ ಮುತ್ತಿಗೆಗೆ ಕರವೇ ಮುಂದಾಗಿದ್ದು, ರಾಜ್ಯದ ಮೂಲೆ ಮೂಲೆಗಳಿಂದ ಕಾರ್ಯಕರ್ತರು ಆಗಮಿಸಲಿದ್ದಾರೆ ಎಂದು ಸಂಘಟನೆಯ ರಾಜ್ಯಾಧ್ಯಕ್ಷ ನಾರಾಯಣಗೌಡ ತಿಳಿಸಿದ್ದಾರೆ. ರಾಜ್ಯಪಾಲರ ಪತ್ರದ ಬಗ್ಗೆ ಕಿಡಿ ಕಾರಿರುವ ನಾರಾಯಣಗೌಡ, ರಾಜ್ಯದ ಶಿಕ್ಷಣ ವ್ಯವಸ್ಥೆಯಲ್ಲಿ ಕಾಲಕಾಲಕ್ಕೆ ಬದಲಾವಣೆ ಮಾಡುವ ಸಂವಿಧಾನಬದ್ಧ ಹಕ್ಕು ರಾಜ್ಯ ಸರ್ಕಾರಕ್ಕಿದೆ. ಸರ್ಕಾರ ಈಗ ಗ್ರೇಡಿಂಗ್ ವ್ಯವಸ್ಥೆ ಜಾರಿಗೆ ತರುತ್ತಿರುವುದಕ್ಕೆ ಸಾಕಷ್ಟು ಕಾರಣಗಳಿವೆ. ಇದರ ಸಾಧಕ ಬಾಧಕಗಳನ್ನು ನಮ್ಮ ಜನಪ್ರತಿನಿಧಿಗಳು ನೋಡಿಕೊಳ್ಳುತ್ತಾರೆ. ಬೆಂಗಳೂರು ಸ್ಥಳೀಯ ಭಾಷೆಗಳ ಸಂರಕ್ಷಣಾ ಸಂಘದವರು ನಿಮಗೆ ಕೊಟ್ಟಿದ್ದ ಮನವಿಗೆ ತುರ್ತಾಗಿ ಪ್ರತಿಕ್ರಿಯಿಸಿರುವುದನ್ನು ಕೇಳಿ ನಮಗೆ ಆಶ್ಚರ್ಯವಾಯಿತು. ಬೆಂಗಳೂರಿನಲ್ಲಿ ಇಂಥದ್ದೊಂದು ಸಂಘ ಇದೆ ಎಂಬುದೇ ನಮಗೆ ತಿಳಿದಿರಲಿಲ್ಲ ಎಂದರು.

## ಇಂಧನ, ಅನಿಲ ಕೊರತೆ

# ಬಿಜೆಪಿಗರು ಜನರ ಕ್ಷಮೆ ಕೇಳಲಿ

**ಬೆಂಗಳೂರು:** ರಾಜ್ಯದಲ್ಲಿ ಎಲ್‌ಪಿಜಿ ಅಭಾವದಿಂದ ಆಟೋ ಚಾಲಕರಿಗೆ ಬಹಳ ತೊಂದರೆಯಾಗುತ್ತಿದೆ. ಇದರಿಂದ ಸಂಚಾರ ವ್ಯವಸ್ಥೆಯ ಮೇಲೆ ಪರಿಣಾಮ ಉಂಟಾಗುತ್ತಿದೆ. ಅಲ್ಲದೆ, ಹೋಟೇಲ್ ಉದ್ಯಮ ಕೂಡಾ ಸಮಸ್ಯೆ ಎದುರಿಸುತ್ತಿದೆ. ಕೇಂದ್ರ ಸರ್ಕಾರ ಈ ಬಗ್ಗೆ ಗಮನಹರಿಸಬೇಕು ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆಗ್ರಹಿಸಿದರು.



ಸುದ್ದಿಗಾರರ ಜೊತೆ ಶನಿವಾರ ಮಾತನಾಡಿದ ಅವರು, ಕಳೆದ ಚುನಾವಣೆಯಲ್ಲಿ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬಂದ ಮತಕ್ಕಿಂತ ಈ ಬಾರಿಯ ಉಪ ಚುನಾವಣೆಯಲ್ಲಿ ಹೆಚ್ಚು ಮತ ಬೀಳಲಿದೆ. ನಮ್ಮ ಅಭ್ಯರ್ಥಿಗಳು ಹೆಚ್ಚು ಮತಗಳ ಅಂತರದಲ್ಲಿ ಗೆಲ್ಲಲಿದ್ದಾರೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಉಪಚುನಾವಣೆ ಪ್ರಚಾರ ಮಾಡಿದ್ದೇನೆ. ನಮ್ಮ ಕಾರ್ಯಕರ್ತರು ಬಹಳ ಚೆನ್ನಾಗಿ ಕೆಲಸ ಮಾಡುತ್ತಿದ್ದಾರೆ. ಪ್ರತಿ ಮನೆ ಮನೆಗೆ ಹೋಗಿ ಗ್ಯಾರಂಟಿ ಯೋಜನೆಗಳ ಬಗ್ಗೆ ಮನವರಿಕೆ ಮಾಡುತ್ತಿದ್ದಾರೆ. ಗ್ಯಾರಂಟಿ ಫಲಾನುಭವಿಗಳಲ್ಲಿ ಕಳೆದ ಬಾರಿ ಬಿಜೆಪಿಗೆ ಮತ ಹಾಕಿರುವವರೂ ಕೂಡ ಈ ಬಾರಿ ಕಾಂಗ್ರೆಸ್ ಗೆ ಮತ ಹಾಕುವುದಾಗಿ ತಿಳಿಸಿದ್ದಾರೆ. ಬೆಲೆ ಏರಿಕೆ ಆಗುತ್ತಿರುವ ಪರಿಸ್ಥಿತಿಯಲ್ಲಿ ಗ್ಯಾರಂಟಿ ಯೋಜನೆ ಎಷ್ಟು ನೆರವಾಗುತ್ತಿವೆ ಎಂದು ಸ್ಮರಿಸುತ್ತಿದ್ದಾರೆ. ಇವುಗಳನ್ನು ಉಳಿಸಿಕೊಳ್ಳಲು ಜನ ತೀರ್ಮಾನಿಸಿದ್ದಾರೆ

ಎಲ್‌ಪಿಜಿ ಪೂರೈಕೆ ಅಧಿಕಾರ ರಾಜ್ಯ ಸರ್ಕಾರದ ಕೈಯಲ್ಲಿಲ್ಲ. ಕೇಂದ್ರ ಸರ್ಕಾರದ ವ್ಯಾಪ್ತಿಗೆ ಬರುತ್ತದೆ. ಕೇಂದ್ರ ಸರ್ಕಾರ ಸರಿಯಾಗಿ ಮುಂಜಾಗ್ರತೆ, ನೀತಿ ರೂಪಿಸಬೇಕಿತ್ತು. ಆದರೆ, ಈ ವಿಚಾರದಲ್ಲಿ ವಿಫಲವಾಗಿದೆ. ಈ ವಿಚಾರವಾಗಿ ಬಿಜೆಪಿಯವರು ಈವರೆಗೂ ಯಾಕೆ ಮಾತನಾಡುತ್ತಿಲ್ಲ. ನಮ್ಮಿಂದ ತೊಂದರೆಯಾಗಿದೆ ಎಂದು ಒಪ್ಪಿಕೊಂಡು ಜನರ ಬಳಿ ಕ್ಷಮೆ ಕೋರಬೇಕು.

**– ಡಿ.ಕೆ. ಶಿವಕುಮಾರ್**
ಉಪ ಮುಖ್ಯಮಂತ್ರಿ

# ಜಯಣ್ಣ ಫಿಲಂಸ್ ಮುಖೇನ ಆದಿತ್ಯ ನಟನೆಯ ಟೆರರ್ ದರ್ಶನ

## ಏಪ್ರಿಲ್ 10ರಂದು ರಾಜ್ಯಾದ್ಯಂತ ತೆರೆಗೆ ಸಿಲ್ಕ್ ಮಂಜು, ರವಿ ಹಾಗೂ ಸ್ಮಿತಾ ವಸಿಷ್ಠ ನಿರ್ಮಾಣದ ಸಿನಿಮಾ





ಸಿಲ್ಕ್ ಮಂಜು, ರವಿ ಹಾಗೂ ಸ್ಮಿತಾ ವಸಿಷ್ಠ ಅವರ ನಿರ್ಮಾಣದ, ರಂಜನ್ ಶಿವರಾಮ್ ಗೌಡ ನಿರ್ದೇಶನದಲ್ಲಿ ಆದಿತ್ಯ ನಾಯಕರಾಗಿ ನಟಿಸಿರುವ 'ಟೆರರ್' ಚಿತ್ರ ಆರಂಭದಿಂದ ಸಾಕಷ್ಟು ಸದ್ದು ಮಾಡುತ್ತಿದೆ. ಹಾಡುಗಳು ಹಾಗೂ ಟೀಸರ್ ಮೂಲಕ ಜನಪ್ರಿಯವಾಗಿರುವ ಈ ಚಿತ್ರದ ಟ್ರೇಲರ್ ಇತ್ತೀಚೆಗೆ ಅದ್ದೂರಿಯಾಗಿ ಬಿಡುಗಡೆಯಾಯಿತು. ಹಿರಿಯ ನಿರ್ದೇಶಕ ಎಸ್ ವಿ ರಾಜೇಂದ್ರಸಿಂಗ್ ಬಾಬು, ಹಿರಿಯ ಕಲಾವಿದರಾದ ಜೈಜಗದೀಶ್, ವಿಜಯಲಕ್ಷ್ಮಿ ಸಿಂಗ್, ಸುಂದರರಾಜ್, ಪ್ರಮೀಳಾ ಜೋಷಾಯ್, ಡಿಂಗ್ರಿ ನಾಗರಾಜ್, ಲಹರಿ ವೇಲು ಹಾಗೂ ಬ್ರಹ್ಮಾಂಡ ಗುರೂಜಿ 'ಟೆರರ್' ಚಿತ್ರದ ಟ್ರೇಲರ್ ಅನಾವರಣ ಮಾಡಿ ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು.

ನಂತರ ನಟ ಆದಿತ್ಯ 'ನಮ್ಮ ಚಿತ್ರ ಆರಂಭವಾದ ದಿನದಿಂದಲೂ ಪ್ರೋತ್ಸಾಹ ನೀಡುತ್ತಾ ಬಂದಿರುವ ಪ್ರತಿಯೊಬ್ಬರಿಗೂ ಧನ್ಯವಾದ. ಚಿತ್ರ ಉತ್ತಮವಾಗಿ ಮೂಡಿಬರಲು ಇಡೀ ಚಿತ್ರತಂಡ ಕಾರಣ. ವಿಶೇಷವಾಗಿ ಇಂತಹ ಸಂದರ್ಭದಲ್ಲಿ ಚಿತ್ರಕ್ಕೆ ಬಂಡವಾಳ ಹೂಡಿರುವ ನಿರ್ಮಾಪಕರಿಗೆ ವಿಶೇಷ ಧನ್ಯವಾದ. ಇನ್ನೂ ನಿರ್ದೇಶಕ ರಂಜನ್ ಅವರು ಮೊದಲ ನಿರ್ದೇಶನದಲ್ಲೇ ಒಂದೊಳ್ಳೆ ಕಥೆ ಮಾಡಿಕೊಂಡಿದ್ದಾರೆ. ನಾನು ಹಾಗೂ ಶ್ರೀನಗರ ಕಿಟ್ಟಿ 21 ವರ್ಷಗಳ ನಂತರ ಈ ಚಿತ್ರದಲ್ಲಿ ನಟಿಸಿದ್ದೇವೆ. ದೇವರಾಜ್, ಶಶಿಕುಮಾರ್, ಕುಮಾರ್ ಬಂಗಾರಪ್ಪ, ಶರತ್ ಲೋಹಿತಾಶ್ವ ಹೀಗೆ ಅನೇಕ ಹಿರಿಯ ಕಲಾವಿದರು ಈ ಚಿತ್ರದಲ್ಲಿ ನಟಿಸಿದ್ದಾರೆ. ಹರ್ಷವರ್ಧನ್ ರಾಜ್ ಸಂಗೀತ ನಿರ್ದೇಶನ ಹಾಗೂ ಡಾ||ವಿ.ನಾಗೇಂದ್ರ ಪ್ರಸಾದ್ ಅವರ ಸಾಹಿತ್ಯ ಚಿತ್ರದ ಹೈಲೆಟ್ ಎಂದರೆ ತಪ್ಪಾಗಲಾರದು. ನಮ್ಮ ಚಿತ್ರ ಇದೇ ಏಪ್ರಿಲ್ 10 ರಂದು ಬಿಡುಗಡೆಯಾಗುತ್ತಿದೆ. ನಿಮ್ಮೆಲ್ಲರ ಪ್ರೋತ್ಸಾಹವಿರಲಿ' ಎಂದರು.

ನಿರ್ದೇಶಕರು ಬಂದು ಕಥೆ ಹೇಳಿದಾಗ ನಿರ್ಮಾಪಕರು ಯಾರು ಎಂದು ಕೇಳಿದೆ. ಸಿಲ್ಕ್ ಮಂಜು ಅವರು ಅಂತ ಹೇಳಿದರು. ನಾನು ಕಥೆ ಹೇಳಬೇಡಿ. ಮಂಜು ಅವರು ನನ್ನ ಸಾಕಷ್ಟು ವರ್ಷಗಳ ಸ್ನೇಹಿತರು. ಅವರಿಗಾಗಿ ಈ ಸಿನಿಮಾ ಮಾಡುತ್ತೇನೆ ಅಂದೆ. ಇನ್ನೂ ಗೆಳೆಯ ಆದಿತ್ಯ ಅವರ ಜೊತೆಗೆ ಆದಿ ಚಿತ್ರದಲ್ಲಿ ನಟಿಸಿದ್ದೆ. ಬಹಳ ವರ್ಷಗಳ ನಂತರ ಈಗ ಈ ಚಿತ್ರದಲ್ಲಿ ನಟಿಸಿದ್ದೇನೆ' ಎಂದು ನಟ ಶ್ರೀನಗರ ಕಿಟ್ಟಿ ಹೇಳಿದರು. 'ನಿರ್ದೇಶಕರು ಹೇಳಿದ ಕಥೆ ಬಹಳ ಇಷ್ಟವಾಯಿತು. ನಿರ್ಮಾಣಕ್ಕೆ ಮುಂದಾದೆ. ಅಮೇರಿಕಾದಲ್ಲಿರುವ ನನ್ನ ಸ್ನೇಹಿತ ರವಿ ಅವರು ಸಹ ನನ್ನ ಜೊತೆ ನಿರ್ಮಾಣಕ್ಕೆ ಜೊತೆಯಾಗಿದ್ದಾರೆ. ಚಿತ್ರಕ್ಕೆ ಸಹಕಾರ ನೀಡಿದ ಎಲ್ಲರಿಗೂ ಧನ್ಯವಾದ. ದಯವಿಟ್ಟು ನಮ್ಮ ಚಿತ್ರವನ್ನು ಎಲ್ಲರೂ ನೋಡಿ, ಪ್ರೋತ್ಸಾಹ ನೀಡಿ' ಎಂದರು ನಿರ್ಮಾಪಕ ಸಿಲ್ಕ್ ಮಂಜು. ಸಹಕಾರ ನೀಡಿದ ಚಿತ್ರತಂಡಕ್ಕೆ ಹಾಗೂ ಆಗಮಿಸಿದ ಅತಿಥಿಗಳಿಗೆ ನಿರ್ದೇಶಕ ರಂಜನ್ ಶಿವರಾಮ್ ಗೌಡ ಧನ್ಯವಾದ ಹೇಳಿದರು.




# ಸ್ಟಾರ್ ಕಾಸ್ಟ್ ಜತೆ ಮೊದಲ ಹಂತದ ಶೂಟಿಂಗ್ ಮುಗಿಸಿದ ಕ್ಲಾಸ್ ಆಫ್ ಮೈಸೂರು



ಹೆಸರಿನಲ್ಲೇ ಆಕರ್ಷಣೆ ತರಿಸುವ 'ಕ್ಲಾಸ್ ಆಫ್ ಮೈಸೂರು' ಚಿತ್ರದ ಮುಹೂರ್ತ ಮತ್ತು ಶೀರ್ಷಿಕೆ ಅನಾವರಣ ಸಮಾರಂಭವು ಶ್ರೀ ಬಂಡೆ ಮಹಾಂಕಾಳಿ ಅಮ್ಮನ ಸನ್ನಿದಿಯಲ್ಲಿ ಅದ್ದೂರಿಯಾಗಿ ನಡೆದಿತ್ತು. 'ಯಥಾಭವ' ನಿರ್ಮಿಸಿ, ಆಕ್ಷನ್ ಕಟ್ ಹೇಳಿದ್ದ ಗೌತಂ ಬಸವರಾಜು ಈ ಚಿತ್ರದ ಮೂಲಕ ಮತ್ತೊಂದು ವಿಭಿನ್ನ ಅನುಭವ ನೀಡಲು ಸಜ್ಜಾಗಿದ್ದು, ಸಿನಿಮಾಕ್ಕೆ ಕಥೆ,ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳುವ ಜತೆಗೆ ಮಾಕ್ಟ್ ಎಂಟರ್‌ಟೈನ್‌ಮೆಂಟ್ಸ್ ಬ್ಯಾನರ್ ಅಡಿಯಲ್ಲಿ ಬಂಡವಾಳ ಹೂಡುತ್ತಿದ್ದಾರೆ.

ಇವರೊಂದಿಗೆ ವಿಜಯೇಂದ್ರ, ಸೂರ್ಯವಂಶಿ ಸಹ ನಿರ್ಮಾಪಕರಾಗಿ ಕೈ ಜೋಡಿಸಿದ್ದಾರೆ. ಬಹಳ ನಿರೀಕ್ಷೆಯಲ್ಲಿರುವ 'ಕ್ಲಾಸ್ ಆಫ್ ಮೈಸೂರು' ಮೊದಲ ಹಂತದ ಚಿತ್ರೀಕರಣವು ಗೋವಾ ಮತ್ತು ಗೋಕರ್ಣ ಸುಂದರ ತಾಣಗಳಲ್ಲಿ ಯಶಸ್ವಿಯಾಗಿ ಪೂರ್ಣಗೊಳಿಸಿದೆ. ರಂಗಾಯಣ ರಘು, ದತ್ತಣ್ಣ, ಶರತ್ ಲೋಹಿತಾಶ್ವ, ಮಹಾಂತೇಶ್, ತಬಲನಾಣಿ, ಬಿರಾದಾರ್ ಮುಂತಾದವರು ದೃಶ್ಯಗಳಲ್ಲಿ ಪಾಲ್ಗೊಂಡಿದ್ದರು. ಸಿನಿಮಾವು ಹಾಸ್ಯ ಭರಿತ ಚಿತ್ರವಾಗಿದ್ದು ಸಂಸ್ಕತಿ ಮತ್ತು ಭಾವನೆಗಳನ್ನು ಒಟ್ಟುಗೂಡಿಸಿದ ಕಥೆಯನ್ನು ಹೊಂದಿದೆ. ತಾರಾಗಣದಲ್ಲಿ ತಾರಾಅನುರಾಧ, ಅಲ್ಲದೆ ಹಿರಿಯ ಹಾಗೂ ಅನುಭವಿ ಕಲಾವಿದರ ಸಮಾಗಮವಾಗಿದೆ. ಅಲ್ಲದೆ ವಿಜಿಯೇಂದ್ರ, ಸೂರ್ಯವಂಶಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಜೋ ಕೋಸ್ಟಾ ಸಂಗೀತ, ಎಸ್.ಕೆ.ರಾವ್ ಛಾಯಾಗ್ರಹಣ, ನಾಗಾರ್ಜುನ ಶರ್ಮ ಸಾಹಿತ್ಯ, ಮಾಸ್ತಿ ಸಂಭಾಷಣೆ, ಕಲೆ ಉಲ್ಲಾಸ್ ಹೈದರ್ ಅವರದಾಗಿದೆ. ಎರಡನೇ ಹಂತದ ಶೂಟಿಂಗ್‌ನ್ನು ಏಪ್ರಿಲ್ ತಿಂಗಳಲ್ಲಿ ನಡೆಸಲು ತಂಡವು ಯೋಜನೆ ರೂಪಿಸಿಕೊಂಡಿದೆ.

# ಸಂಭಾವನೆ ಜೊತೆಗೆ ಲಾಭದಲ್ಲಿ ಪಾಲು.. ಎ. ಆರ್ ರಹಮಾನ್ ಹೊಸ ದಾಖಲೆ; ಯಶ್ ಕೂಡ ನಟಿಸಿರೋ ಸಿನಿಮಾ






ಭಾರತೀಯ ಸಿನಿಮಾಗಳಲ್ಲಿ ಸಂಗೀತಕ್ಕೆ ಬಹಳ ಮಹತ್ವ ಇದೆ. ಹಾಡುಗಳ ಜೊತೆಗೆ ಹಿನ್ನೆಲೆ ಸಂಗೀತ ಬಹಳ ಮುಖ್ಯವಾಗುತ್ತದೆ. ಹಾಗಾಗಿ ಸಂಗೀತದ ಬಗ್ಗೆ ಫಿಲ್ಮ್ ಮೇಕರ್ಸ್ ಬಹಳ ತಲೆ ಕೆಡಿಸಿಕೊಳ್ಳುತ್ತಾರೆ. ಇತ್ತೀಚೆಗೆ ಕೋಟಿ ಕೋಟಿ ಸಂಭಾವನೆ ಕೊಟ್ಟು ಟ್ಯೂನ್ ಹಾಕಿಸುತ್ತಾರೆ. ಪ್ಯಾನ್ ಇಂಡಿಯಾ ಸಿನಿಮಾಗಳ ಟ್ರೆಂಡ್ ಶುರುವಾದ ಬಳಿಕ ಕಲಾವಿದರ ಸಂಭಾವನೆ ರೀತಿ ತಂತ್ರಜ್ಞರ ಸಂಭಾವನೆ ಕೂಡ ಹೆಚ್ಚಾಗಿದೆ.

ಆಸ್ಕರ್ ವಿಜೇತ ಎ. ಆರ್ ರಹಮಾನ್ ಸಂಗೀತದ ಬಗ್ಗೆ ಬಿಡಿಸಿ ಹೇಳಬೇಕಿಲ್ಲ. ತಮ್ಮ ಅದ್ಭುತ ಸಂಗೀತದ ಮೂಲಕ ಪ್ರಪಂಚಾದಾದ್ಯಂತ ಗಮನ ಸೆಳೆದವರು ರೆಹಮಾನ್.. ಅಂದಹಾಗೆ ತಮ್ಮ ಸಂಗೀತದ ಪ್ರಯಾಣವನ್ನು ಕನ್ನಡ ಸಿನಿಮಾಗಳ ಮೂಲಕವೇ ಅವರು ಆರಂಭಿಸಿದ್ದರು. ಇದೀಗ ಭಾರತೀಯ ಚಿತ್ರರಂಗದಲ್ಲೇ ಅತಿಹೆಚ್ಚು ಸಂಭಾವನೆ ಪಡೆಯುವ ಸಂಗೀತ ನಿರ್ದೇಶಕ ಎನಿಸಿಕೊಂಡಿದ್ದಾರೆ. ಮೊದಲಿನ ರೀತಿ ಇತ್ತೀಚೆಗೆ ರಹಮಾನ್ ಸಂಗೀತ ಕಮಾಲ್ ಮಾಡ್ತಿಲ್ಲ. ಆದರೂ ಆಸ್ಕರ್ ವಿಜೇತ ಸಂಗೀತ ನಿರ್ದೇಶನದ ಕ್ರೇಜ್ ಕಮ್ಮಿ ಆಗಿಲ್ಲ. ರಾಮ್‌ಚರಣ್ ನಟನೆಯ 'ಪೆದ್ದಿ' ಚಿತ್ರದ ಹಾಡುಗಳು ಸದ್ದು ಮಾಡ್ತಿದೆ. 'ಮೂನ್ ವಾಕ್' ಎಂಬ ಮತ್ತೊಂದು ಚಿತ್ರಕ್ಕೂ ಟ್ಯೂನ್ ಹಾಕುತ್ತಿದ್ದಾರೆ. ಮಣಿರತ್ನಂ ಹಾಗೂ ರಹಮಾನ್ ಕಾಂಬಿನೇಷನ್ ಸಿನಿಮಾ ಆಲ್ಬಮ್‌ಗಳು ಹಿಟ್ ಲಿಸ್ಟ್ ಸೇರಿವೆ. ಮಣಿರತ್ನಂ ಮುಂದಿನ ಚಿತ್ರಕ್ಕೂ ಒಟ್ಟಿಗೆ ಕೈ ಜೋಡಿಸಿದ್ದಾರೆ.

ಬಹುನಿರೀಕ್ಷಿತ 'ರಾಮಾಯಣ' ಚಿತ್ರಕ್ಕೂ ಎ. ಆರ್ ರಹಮಾನ್ ಸಂಗೀತ ಸಂಯೋಜನೆ ಮಾಡುತ್ತಿದ್ದಾರೆ. 4000 ಕೋಟಿ ರೂ. ಬಜೆಟ್‌ನಲ್ಲಿ ಈ ಸಿನಿಮಾ ನಿರ್ಮಾಣವಾಗುತ್ತಿದೆ. ಅದಕ್ಕೆ ತಕ್ಕಂತೆ ಕಲಾವಿದರು, ತಂತ್ರಜ್ಞರು ಭಾರೀ ಸಂಭಾವನೆ ಪಡೆಯುತ್ತಿದ್ದಾರೆ. ಹಾಲಿವುಡ್ ಸಂಗೀತ ನಿರ್ದೇಶಕ ಹ್ಯಾನ್ಸ್ ಜಿಮ್ಮರ್ ಜೊತೆ ಸೇರಿ ರಹಮಾನ್ ಕೆಲಸ ಮಾಡುತ್ತಿದ್ದಾರೆ. ಪ್ಯಾನ್ ಇಂಡಿಯಾ ಅಲ್ಲ ಪ್ಯಾನ್ ವರ್ಲ್ಡ್ ಮಟ್ಟದಲ್ಲಿ ನಮ್ಮ 'ರಾಮಾಯಣ' ಕಥೆಯನ್ನು ತೆರೆಗೆ ತರಲಾಗ್ತಿದೆ. ಹಾಗಾಗಿ ಹಾಲಿವುಡ್ ಮಟ್ಟದಲ್ಲಿ ಹೆಸರು ಮಾಡಿರುವ ರಹಮಾನ್ ಅವರನ್ನು ಸಂಗೀತ ನಿರ್ದೇಶಕರಾಗಿ ಆಯ್ಕೆ ಮಾಡಿಕೊಂಡಿದ್ದಾರೆ.

ಟಾಕ್ಸಿಕ್' ಚಿತ್ರಕ್ಕೆ ಸಂಗೀತ ಸಂಯೋಜನೆ ಮಾಡಲು ಅನಿರುದ್ಧ್ ರವಿಚಂದರ್ 15 ಕೋಟಿ ರೂ. ಸಂಭಾವನೆ ಪಡೆಯುತ್ತಾರೆ ಎನ್ನಲಾಗಿತ್ತು. ಇದು ಭಾರತೀಯ ಚಿತ್ರರಂಗದಲ್ಲಿ ಸಂಗೀತ ನಿರ್ದೇಶಕನಿಗೆ ಸಿಗುವ ಭಾರೀ ಸಂಭಾವನೆ ಎನ್ನಲಾಗಿತ್ತು. ಆದರೆ ಬಳಿಕ ಅದೆಲ್ಲಾ ಸುಳ್ಳಾಗಿತ್ತು. ಆದರೆ 'ರಾಮಾಯಣ' ಚಿತ್ರಕ್ಕಾಗಿ ರಹಮಾನ್ ಬರೋಬ್ಬರಿ 30 ಕೋಟಿ ರೂ. ಸಂಭಾವನೆ ಪಡೆಯುತ್ತಿದ್ದಾರೆ ಎನ್ನುವ ಊಹಾಪೋಹ ಶುರುವಾಗಿದೆ. ಸಂಭಾವನೆ ಜೊತೆಗೆ ಲಾಭದಲ್ಲಿ ಪಾಲು ಕೂಡ ಸಿಗಲಿದೆಯಂತೆ. ಅದೇ ನಿಜವಾಗಿದ್ದರೆ ಭಾರತೀಯ ಚಿತ್ರರಂಗದಲ್ಲಿ ಇದು ಹೊಸ ದಾಖಲೆಯೇ ಸರಿ. ರಹಮಾನ್ ಮಾತ್ರವಲ್ಲ 'ರಾಮಾಯಣ' ಚಿತ್ರದಲ್ಲಿ ಕೆಲಸ ಮಾಡುವ ಪ್ರತಿಯೊಬ್ಬರಿಗೂ ಭಾರೀ ಸಂಭಾವನೆ ಸಿಗುತ್ತಿದೆ. ಟೈಮ್ಸ್ ಆಫ್ ಇಂಡಿಯಾ ವರದಿ ಪ್ರಕಾರ ಶ್ರೀರಾಮನ ಪಾತ್ರದಲ್ಲಿ ನಟಿಸುತ್ತಿರುವ ರಣಬೀರ್ ಕಪೂರ್ ಸರಣಿಯ 2 ಚಿತ್ರಕ್ಕರ 150 ಕೋಟಿ ರೂ. ಸಂಭಾವನೆ ಪಡೆಯುತ್ತಿದ್ದಾರೆ ಎನ್ನಲಾಗ್ತಿದೆ. ಎರಡು ಭಾಗಗಳಾಗಿ ಸಿನಿಮಾ ತೆರೆಗೆ ಬರ್ತಿದ್ದು ತಲಾ 75 ಕೋಟಿ ರೂ. ಸಂಭಾವನೆ ಜೇಬಿಗಿಳಿಸುತ್ತಿದ್ದಾರೆ. ಸೀತೆ ಪಾತ್ರಕ್ಕೆ ಎರಡೂ ಚಿತ್ರಗಳಿಗೆ ಸೇರಿ 12 ಕೋಟಿ ರೂ. ಸಾಯಿ ಪಲ್ಲವಿ ಪಡೆಯುತ್ತಿದ್ದಾರೆ. ರಾವಣನಾಗಿ ನಟಿಸೋಕೆ ಯಶ್ ಸರಣಿ ಚಿತ್ರಕ್ಕೆ ಸೇರಿ 100 ಕೋಟಿ ರೂ. ಸಂಭಾವನೆ ಪಡೆಯುತ್ತಾರೆ ಎನ್ನಲಾಗ್ತಿದೆ. ಆದರೆ ತಮ್ಮ ಸಂಭಾವನೆ ಹಣವನ್ನು ಚಿತ್ರದ ನಿರ್ಮಾಣಕ್ಕೆ ತೊಡಗಿಸಿ ಒಟ್ಟು ಆದಾಯದಲ್ಲಿ ಪಾಲು ಪಡೆಯುತ್ತಾರೆ ಎನ್ನಲಾಗ್ತಿದೆ. ಹನುಮಂತನ ಪಾತ್ರಕ್ಕೆ ಸನ್ನಿ ಡಿಯೋಲ್ ಎರಡು ಸಿನಿಮಾ ಸೇರಿ 40 ಕೋಟಿ ರೂ. ಸಂಭಾವನೆ ಪಡೆಯುತ್ತಾರೆ ಎಂದು ಗುಲ್ಲಾಗಿದೆ.

# ಏನಯ್ಯ ಗಂಡಸೇನಯ್ಯ.. ಸಿನಿಮಾ ಬಿಡಿಸಿಕೋ.. ಇಲ್ಲಾ ಹಾಗೇ ರಿಲೀಸ್ ಮಾಡು; ರವಿ ಶ್ರೀವತ್ಸಗೆ ಪಾರ್ವತಮ್ಮ ಹೀಗಂದಿದ್ಯಾಕೆ?






ಸಿನಿಮಾರಂಗಕ್ಕೂ ಸೆನ್ಸಾರ್ ಬೋರ್ಡ್‌ಗೂ ಬಿಡಲಾರದ ನಂಟು. ಅದು ಎಂತದಹದ್ದೇ ಸಿನಿಮಾ ಮಾಡಿದರೂ, ಸೆನ್ಸಾರ್ ಬೋರ್ಡ್ ಮುಂದೆ ಬರಲೇಬೇಕು. ಅವರ ಸಿನಿಮಾ ನೋಡಲೇಬೇಕು. ಒಂದಿಷ್ಟು ತಿದ್ದು ಪಡಿಗಳನ್ನು ಮಾಡಲೇಬೇಕು. ಆ ಮೇಲೆ ಸಿನಿಮಾ ರಿಲೀಸ್‌ಗೆ ಅನುಮತಿ ಸಿಗುತ್ತೆ. ಆದರೆ, ಕೆಲವೊಮ್ಮೆ ಸೆನ್ಸಾರ್ ಬೋರ್ಡ್‌ನ ಅಧಿಕಾರಿಗಳು ಸಿನಿಮಾವನ್ನು ಬಿಡುಗಡೆ ಮಾಡುವುದಕ್ಕೆ ಒಪ್ಪುವುದಿಲ್ಲ. ಇಂತಹ ಸಾಕಷ್ಟು ಉದಾಹರಣೆಗಳು ಬೇರೆ ಬೇರೆ ಚಿತ್ರರಂಗದಲ್ಲಿ ಸಿಗುತ್ತವೆ.

ಸಿನಿಮಾದ ಕಂಟೆಂಟ್ ವಿವಾದಾತ್ಮಕವಾಗಿದ್ದರೆ, ಸಮಾಜದ ಸ್ವಾಸ್ಥ್ಯವನ್ನು ಹಾಳು ಮಾಡುತ್ತೆ ಅಂತ ಅನಿಸಿದರೆ, ಹೀಗೆ ಬೇರೆ ಬೇರೆ ವಿಷಯಗಳಿಗೆ ಸರಾಸಟಾಗಿ ಸಿನಿಮಾ ಬಿಡುಗಡೆಯನ್ನು ತಿರಸ್ಕರಿಸಿಬಿಡುತ್ತಾರೆ. ಹೀಗೆ ಸೆನ್ಸಾರ್ ಕೈಗೆ ಸಿಕ್ಕಿಕೊಂಡಿದ್ದ ಒಂದು ಕನ್ನಡ ಸಿನಿಮಾ 'ಮಾದೇಶ'. ಈ ಸಿನಿಮಾ ರಿಲೀಸ್‌ಗೆ ಸೆನ್ಸಾರ್ ಅಧಿಕಾರಿಗಳು ಒಪ್ಪಿರಲಿಲ್ಲ. ಸಿನಿಮಾವನ್ನೇ ಬ್ಯಾನ್ ಮಾಡಿದ್ದರು. ಆ ವೇಳೆ ಶಿವರಾಜ್‌ಕುಮಾರ್ ಹಾಗೂ ಪಾರ್ವತಮ್ಮ ರಾಜ್‌ಕುಮಾರ್ ಅವರ ಪ್ರತಿಕ್ರಿಯೆ ಹೇಗಿತ್ತು? ಅನ್ನೋದನ್ನು ನಿರ್ದೇಶಕ ರವಿ ಶ್ರೀವತ್ಸ ಹೇಳಿದ್ದಾರೆ.

ರವಿ ಶ್ರೀವತ್ಸ 'ಗ್ಯಾಂಗ್ಸ್ ಆಫ್ ಯುಕೆ' ಅನ್ನೋ ಹೊಸ ಸಿನಿಮಾಗೆ ಆಕ್ಷನ್ ಕಟ್ ಹೇಳಿದ್ದಾರೆ. ಈ ಸಿನಿಮಾ ಸಂಬಂಧ ಸುದ್ದಿ ಮನೆ ಯೂಟ್ಯೂಬ್ ಚಾನೆಲ್‌ಗೆ ಸಂದರ್ಶನ ನೀಡಿದ್ದಾರೆ. ಈ ಸಮಯದಲ್ಲಿ 'ಮಾದೇಶ' ಸಿನಿಮಾಗೆ ಸೆನ್ಸಾರ್ ಕೊಡದೇ ಇದ್ದಾಗ ಪಾರ್ವತಮ್ಮ ರಾಜ್‌ಕುಮಾರ್ ಅವರ ಖಡಕ್ ಪ್ರತಿಕ್ರಿಯೆ ಹೇಗಿತ್ತು? ಅನ್ನೋದನ್ನು ಸ್ವಾರಸ್ಯಕರವಾಗಿ ಹೇಳಿದ್ದಾರೆ. ಅದರ ಝಲಕ್ ಇಲ್ಲಿದೆ.

2008ರಲ್ಲಿ 'ಮಾದೇಶ' ಸಿನಿಮಾ ರಿಲೀಸ್ ಆಗಿತ್ತು. ಶಿವರಾಜ್‌ಕುಮಾರ್, ರವಿ ಬೆಳಗರೆ ಪ್ರಮುಖ ಪಾತ್ರದಲ್ಲಿ ನಟಿಸಿದ್ದರು. ಈ ಸಿನಿಮಾ ಅಂಡವರ್ಲ್ಡ್‌ಗೆ ಸಂಬಂಧಿಸಿದ ಕಥೆಯಾಗಿದ್ದರಿಂದ ಹಿಂಸಾತ್ಮಕ ಸನ್ನಿವೇಶಗಳು ಇದ್ದವು. ಅಲ್ಲದೆ ಕೆಲವು ದೃಶ್ಯಗಳು ರಾಜಕೀಯ ಕ್ಷೇತ್ರದಕ್ಕೆ ಸಂಬಂಧಿಸಿತ್ತು. ಹೀಗಾಗಿ ಸೆನ್ಸಾರ್ ಅಧಿಕಾರಿಗಳು ಸಿನಿಮಾ ಮಾಡುವುದಕ್ಕೆ ಒಪ್ಪಲಿಲ್ಲ. ಆ ಸನ್ನಿವೇಶವನ್ನು ರವಿ ಶ್ರೀವತ್ಸ ಈ ಸಂದರ್ಶನದಲ್ಲಿ ವಿವರಿಸಿದ್ದಾರೆ.

ಮಾದೇಶ ಸಿನಿಮಾ ನೋಡಿ ಮೇಲೆ ನಾವು ಸೆನ್ಸಾರ್ ಸರ್ಟಿಫಿಕೇಟ್ ಕೊಡಲಾಗುವುದಿಲ್ಲ ಎಂದು ಹೇಳಿದರು. ಇದನ್ನು ಕೇಳಿ ಕೇಳಿ ಸಾಕಾಗಿತ್ತು. ಇಲ್ಲ ರೀ ಸೆನ್ಸಾರ್ ಸರ್ಟಿಫಿಕೇಟ್ ಕೊಡಲಾಗುವುದಿಲ್ಲ ಎಂದು ಹೇಳಿದರು. ಅದು ಆಗೋಯ್ತು. ಆಗ ಶಿವಣ್ಣನಿಗೆ ಹೇಳಿದೆ. ಏನಮ್ಮ ಅಂದರು.. ಬ್ಯಾನ್ ಆಯ್ತು ಅಣ್ಣ ಅಂದೆ. ಏನಮ್ಮ ಹೇಳ್ತಿದ್ದೀಯಾ? ಅಂದರು. ಯಾವನಮ್ಮ ಸೆನ್ಸಾರ್ ಆಫೀಸರ್? ಓಂ ಕೂಡ ಬ್ಯಾನ್ ಆಗಿತ್ತಮ್ಮ. ಈಗೇನು ಮಾಡೋದು ಅಂದರು. ಬಿಡೋದು ಬೇಡ ಫೈಟ್ ಮಾಡೋಣ ಅಂದೆ. ಸರಿನಮ್ಮ ಅಂತ ಫೋನ್ ಇಟ್ಟರು. ಎಂದು ರವಿ ಶ್ರೀವತ್ಸ ಆ ದಿನವನ್ನು ನೆನಪಿಸಿಕೊಂಡಿದ್ದಾರೆ.

ಸೆನ್ಸಾರ್ ಅಧಿಕಾರಿಗೆ ಶಿವರಾಜ್‌ಕುಮಾರ್ ಕ್ಲಾಸ್ ತೆಗೆದುಕೊಂಡಿದ್ದರು. ಇದರಿಂದ ಕೋಪಗೊಂಡ ಸೆನ್ಸಾರ್ ಅಧಿಕಾರಿ ಮಾಧ್ಯಮಗಳಿಗೆ ಮಾಹಿತಿ ನೀಡಿದ್ದು, ದೊಡ್ಡ ಮಟ್ಟಕ್ಕೆ ಸುದ್ದಿಯಾಗಿತ್ತು.ಬೆಳಗ್ಗೆ ಆಗುವುದರೊಳಗೆ ಸೆನ್ಸಾರ್ ಆಫೀಸರ್ ಫೋನ್ ಮಾಡಿದ್ದರು. ಅದಕ್ಕೆ ಹೇಳೋದು ಒಬ್ಬ ಹೀರೋ ತನ್ನ ಸಿನಿಮಾವನ್ನು ಪ್ರೀತಿಸಬೇಕು ಅಂತ. ಶಿವಣ್ಣ ಸೆನ್ಸಾರ್ ಆಫೀಸರ್‌ಗೆ ಕ್ಲಾಸ್ ತೆಗೆದುಕೊಂಡಿದ್ದಾರೆ.

ನಾನು ಹುಡುಗರನ್ನು ಕಳಿಸುತ್ತೇನೆ. ನಾನು ಹಂಗೆ ಮಾಡುತ್ತೇನೆ.





ಹಿಂಗೆ ಮಾಡುತ್ತೇನೆ ಅಂದಿದ್ದಾರೆ. ಆ ಮಹಾನುಭಾವ ಪ್ರೆಸ್‌ಗೆ ಹೇಳಿ ಬಿಡೋದಾ? ಅವಾಚ್ಯ ಶಬ್ಧಗಳಿಂದ ನಿಂಧಿಸಿದ ರಾಜ್ ಕುಮಾರ್ ಪುತ್ರ ಅಂತ ನ್ಯೂಸ್ ಪೇಪರ್‌ನಲ್ಲಿ ಬಂದಿತ್ತು. ಇಲ್ಲ ಅಮ್ಮ ಅದು ಹೇಗೆ ಬಿಡೋಕೆ ಆಗುತ್ತೆ. ಅಮ್ಮನ ಹತ್ತಿರ ಹೋಗಮ್ಮ ಅಂದರು ಎಂದು ಶಿವಣ್ಣನ ಪ್ರತಿಕ್ರಿಯೆಯನ್ನು ನೆನೆದಿದ್ದಾರೆ.ಇತ್ತ ರವಿ ಶ್ರೀವತ್ಸ ಸೀದಾ ಪಾರ್ವತಮ್ಮ ರಾಜ್‌ಕುಮಾರ್ ಬಳಿ ಹೋಗಿದ್ದರು. ಅವರ ಮಾತನ್ನು ಹೇಳಿ ನಿರ್ದೇಶಕರೇ ಶಾಕ್ ಆಗಿದ್ದರು. ಏನಯ್ಯ ಗಂಡಸೇನಯ್ಯ.. ಬ್ಯಾನ್ ಬಿಡಿಸು. ಇಲ್ಲ ಹಾಗೇ ರಿಲೀಸ್ ಮಾಡು ಅಂತಾರೆ ಅವರು. ಅವರು ಶಿವಣ್ಣನಿಗಿಂತ ಒಂದು ಹೆಜ್ಜೆ ಮುಂದಿದ್ದಾರೆ. ನಮಗೆ ಪ್ರೇರಣೆನೇ ಈ ಸಾಲುಗಳು. ನಾವು ಹೆದರುತ್ತಿದ್ವೇನೋ.. ನಾವು ನಮ್ಮ ಡೆತ್ ಸರ್ಟಿಫಿಕೇಟ್‌ಗೆ ಸಹಿ ಹಾಕುವ ಬದಲು ಅವರು ಕೊಟ್ಟಂತ ಕಟ್‌ಗಳಿಗೆ ಸಹಿ ಹಾಕುತ್ತಿದ್ವೇನೋ.. ಸತ್ಯ ಮಾಡಿ ಹೇಳುತ್ತೇನೆ. ಪಾರ್ವತಮ್ಮ ಅವರು ಇಲ್ಲಿ ಕೂತಿದ್ದರು. ಅದೇ ಹೇಳುತ್ತೇನೆ ಪಾರ್ವತಮ್ಮ ಅವರು ತುಂಬಾ ವಿಷಯದಲ್ಲಿ ಪ್ರೇರಣೆಯಾಗಿದ್ದಾರೆ. ಆ ತಾಯಿ ಹಂಗೆ ತಾಯಿ ಆಗಿಯೇ ಇದ್ದರೆ ಸಾಕು. ಎಂದು ರವಿ ಶ್ರೀವತ್ಸ ಈ ಸಂದರ್ಶನದಲ್ಲಿ ರಿವೀಲ್ ಮಾಡಿದ್ದಾರೆ.

This Newspaper is Published by V.Anoop Kumar from 85/j Industrial Suburb, 2nd stage, Yeshwantpur Extension, Bengaluru - 560022 on behalf of V. Anoop Kumar, Edited by V. Anoop Kumar and Printed by V. Anoop Kumar at 85/J, Industrial Suburb, 2nd stage, Yeshwantpur Extension, Bengaluru - 560022